# ನಮ್ಮ ಜನ NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 50 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 05–09–2024 ಗುರುವಾರ | ಪುಟ: 4 | ಬೆಲೆ : ರೂ.2–00

Volume - 02 Issue - 50 | RNI No: KARKAN/2023/88462 | Chitradurga | Date: 05-09-2024 Thursday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಪರಿಸರ ಸ್ನೇಹಿ ಗೌರಿಗಣೇಶ ಹಬ್ಬ ಆಚರಿಸಿ: ಜಿಲ್ಲಾಧಿಕಾರಿ ಟಿ.ವೆಂಕಟೇಶ್ 2

ಗೌರಸಮುದ್ರ ಮಾರಮ್ಮ ಹುಂಡಿಯಲ್ಲಿ 10.53.600 ಹಣ ಸಂಗ್ರಹ 3

ಸಾವಿಯನ್ನು ಒಣಗಿಸಿ ತಂದಂತಹ ರೈತರಿಗೆ ಒಂದು ರೇಟು ಹಸಿ ಸಾವೆಗೂ ಒಂದು ರೇಟು 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಸೆ.5ರಂದು ಶಿಕ್ಷಕರ ದಿನಾಚರಣೆ ಹಾಗೂ ಜಿಲ್ಲಾ ಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪ್ರಧಾನ ಸಮಾರಂಭ

» ಚಿತ್ರದುರ್ಗ

ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಸೆ.5ರಂದು ಬೆಳಿಗ್ಗೆ 10.30ಕ್ಕೆ ನಗರದ ತರಾಸು ರಂಗಮಂದಿರದಲ್ಲಿ ಶಿಕ್ಷಕರ ದಿನಾಚರಣೆ–ಡಾ.ಸರ್ವಪಲ್ಲಿ ರಾಧಾಕೃಷ್ಣನ್‌ರವರ ಜನ್ಮದಿನೋತ್ಸವ ಹಾಗೂ ಜಿಲ್ಲಾ ಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪ್ರಧಾನ ಸಮಾರಂಭ ಆಯೋಜಿಸಲಾಗಿದೆ.ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸುವಾರಿ ಸಚಿವ ಡಿ.ಸುಧಾಕರ್ ಉದ್ಘಾಟಿಸುವರು. ಸಂಸದ ಗೋವಿಂದ ಎಂ ಕಾರಜೋಳ ಘನಉಪಸ್ಥಿತಿ ವಹಿಸುವರು. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಆಹಾರ ಮತ್ತು ನಾಗರೀಕ ಸರಬರಾಜು ನಿಗಮದ ಅಧ್ಯಕ್ಷರು ಹಾಗೂ ಹೊಸದುರ್ಗ ಶಾಸಕ ಬಿ.ಜಿ.ಗೋವಿಂದಪ್ಪ, ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಹಾಗೂ ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ, ಮೊಳಕಾಲ್ಮೂರು ಶಾಸಕ ಎನ್.ವೈ.ಗೋಪಾಲಕೃಷ್ಣ, ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ, ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್.ನವೀನ್, ಚಿದಾನಂದ ಎಂ ಗೌಡ, ಡಿ.ಟಿ.ಶ್ರೀನಿವಾಸ್, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷ ಕೆ.ಅನ್ವರ್ ಭಾಷಾ, ಕರ್ನಾಟಕ ದ್ರಾಕ್ಷರಸ ಮಂಡಳಿ ಅಧ್ಯಕ್ಷ ಡಾ.ಬಿ.ಯೋಗೇಶ್ ಬಾಬು, ಆದಿಜಾಂಬವ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಸ್.ಮಂಜುನಾಥ್, ಕರ್ನಾಟಕ ಸಫಾಯಿ ಕರ್ಮಚಾರಿ ಆಯೋಗದ ಅಧ್ಯಕ್ಷೆ ಸವಿತಾ ರಘು, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ನಗರಸಭೆ ಅಧ್ಯಕ್ಷೆ ಸುಮಿತ ರಘು, ಉಪಾಧ್ಯಕ್ಷೆ ಶ್ರೀದೇವಿ ಚಕ್ರವರ್ತಿ ಹಾಗೂ ವಿಶೇಷ ಆಹ್ವಾನಿತರಾಗಿ ಬೆಂಗಳೂರು ವಿಭಾಗದ ಪ್ರಾದೇಶಿಕ ಆಯುಕ್ತರು ಹಾಗೂ ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಅಮ್ಲಾನ್ ಆದಿತ್ಯ ಬಿಸ್ವಾಸ್, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಸ್.ಜೆ.ಸೋಮಶೇಖರ್, ಎಸ್‌ಪಿ ರಂಜಿತ್ ಕುಮಾರ್ ಬಂಡಾರು ಭಾಗವಹಿಸುವರು.

# ಡಿಸಿಸಿ ಬ್ಯಾಂಕ್ ಚುನಾವಣೆಗೆ ಶಾಸಕ ರಘುಮೂರ್ತಿ ಸ್ಪರ್ಧೆ ತಡೆಯಲು ಸ್ವ ಪಕ್ಷದವರಿಂದಲೇ ಷಡ್ಯಂತ್ರ?

## ಸಹಕಾರ ಸಂಘಗಳ ಅನರ್ಹತೆ ಬಣ ರಾಜಕೀಯ ಪ್ರಾರಂಭನಾ?

» ನಮ್ಮಜನ ಸಮಾಚಾರ

ಚಿತ್ರದುರ್ಗ: ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ಚುನಾವಣೆ ರಾಜಕೀಯ ಸ್ವರೂಪ ಪಡೆದುಕೊಂಡಿದ್ದು 200 ಸಹಕಾರ ಸಂಘಗಳ ಅನರ್ಹತೆ ವಿರುದ್ಧ 16 ಸಹಕಾರ ಸಂಘಗಳು ಮತ್ತು ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ಹೈಕೋರ್ಟ್ ಮೆಟ್ಟಿಲು ಏರಿದ್ದು ಇಂದು ಹೈಕೋರ್ಟ್ ನಲ್ಲಿ ಶಾಸಕ ಟಿ.ರಘುಮೂರ್ತಿ ಅವರ ನಿರ್ದೇಶಕ ಸ್ಥಾನಕ್ಕೆ ಸಲ್ಲಿಸಿರುವ ನಾಮಪತ್ರ ಅಂಗೀಕಾರ ಮಾಡಬೇಕು ಎಂದು ಸೂಚಿಸಿದೆ.

ಡಿಸಿಸಿ ಬ್ಯಾಂಕ್ ನಿರ್ದೇಶಕರ ಸ್ಥಾನಗಳಿಗೆ ಸೆಪ್ಟೆಂಬರ್ 12 ರಂದು ಚುನಾವಣೆ ನಿಗದಿಯಾಗಿದ್ದು ಕಳೆದ ಬಾರಿ ಮತ ಚಲಾಯಿಸಿದ್ದಂತಹ 200 ಸೊಸೈಟಿಗಳಿಗೆ ಮತದಾನದಿಂದ ವಂಚಿತರಾಗಿದ್ದರು.

ಡಿಸಿಸಿ ಬ್ಯಾಂಕ್ ನಿರ್ದೇಶಕರಾಗಿದ್ದ ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ಅವರನ್ನು ಸಹ ನಿರ್ದೇಶಕ ಸ್ಥಾನಕ್ಕೆ ಸ್ಪರ್ಧೆ ಮಾಡದಂತೆ ಅವರ ಪ್ರತಿನಿಧಿಸುವ ಕಡಬನಕಟ್ಟೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಕೂಡ ಮತದಾನದಿಂದ ವಂಚಿತವಾಗಿತ್ತು.

ಅನರ್ಹತೆ ವಿರುದ್ಧ ಹೈಕೋರ್ಟ್ ಮೆಟ್ಟಿಲು ಹತ್ತಿದ ಶಾಸಕ ಟಿ.ರಘುಮೂರ್ತಿ ಅವರಿಗೆ ಚುನಾವಣೆಗೆ ಸ್ಪರ್ಧಿಸುವ ಅವಕಾಶ ದೊರತಿದೆ.

**ಜಿಲ್ಲೆಯಲ್ಲಿ 419 ಸೊಸೈಟಿಗಳಲ್ಲಿ 200 ಅನರ್ಹ:** ಜಿಲ್ಲೆಯಲ್ಲಿ ಕೃಷಿ ಪತ್ತಿನ ಸಹಕಾರ ಸಂಘ, ಹಾಲು ಒಕ್ಕೂಟ, ಅರ್ಬನ್ ಬ್ಯಾಂಕುಗಳು ಸೇರಿದಂತೆ ಒಟ್ಟು 419 ಸೊಸೈಟಿಗಳು ಡಿಸಿಸಿ ಬ್ಯಾಂಕ್‌ಅಡಿಯಲ್ಲಿಕಾರ್ಯನಿರ್ವಹಿಸುತ್ತಿವೆ. ಇದರಲ್ಲಿ ಬರೋಬ್ಬರಿ 200 ಸೊಸೈಟಿಗಳು ಡಿಸಿಸಿ ಬ್ಯಾಂಕಿನ ಬೈಲಾ, ಕಾಯ್ದೆಗಳಿಂದ ಮತದಾನದಿಂದ ವಂಚಿತವಾಗಿದ್ದಾರೆ.



### ಸೊಸೈಟಿ ರದ್ದುಪಡಿಸಿರುವ ಹಿಂದೆ ರಾಜಕೀಯ ಷಡ್ಯಂತ್ರ ಡಿಸಿಸಿ ಚುನಾವಣೆ ಕಾರ್ಯ ಹೀಗಿರುತ್ತೆ

ಒಟ್ಟು 12 ನಿರ್ದೇಶಕ ಸ್ಥಾನಗಳಿಗೆ ಚುನಾವಣೆ ನಡೆಯಲಿದ್ದು, ಇಲ್ಲಿ ಆಯ್ಕೆಯಾದ ನಿರ್ದೇಶಕರು ಆನಂತರ ಅಧ್ಯಕ್ಷರನ್ನು ಆಯ್ಕೆ ಮಾಡಿಕೊಳ್ಳುತ್ತಾರೆ. ಈಗ 'ಎ'ಯಿಂದ 'ಎಫ್'ವರೆಗೆ ಒಟ್ಟು 6ವರ್ಗಗಳಲ್ಲಿ ನಿರ್ದೇಶಕರನ್ನು ಆಯ್ಕೆ ಮಾಡಲಾಗುತ್ತದೆ. 'ಎ' ವರ್ಗದಲ್ಲಿ 6 ತಾಲೂಕುಗಳ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು, 'ಬಿ' ವರ್ಗದಲ್ಲಿ ಟಿಎಪಿಸಿಎಂಎಸ್, 'ಸಿ' ವರ್ಗದಲ್ಲಿ ಪಟ್ಟಣ ವ್ಯಾಪ್ತಿಯ ಅರ್ಬನ್ ಬ್ಯಾಂಕುಗಳು, 'ಡಿ' ವರ್ಗದಲ್ಲಿ ಹಾಲು ಉತ್ಪಾದಕರ ಸಹಕಾರ ಸಂಘಗಳು, 'ಇ' ವರ್ಗದಲ್ಲಿ (DCC Bank Election) ನೇಕಾರ ಮತ್ತಿತರೆ ಸೊಸೈಟಿಗಳು ಹಾಗೂ 'ಎಫ್' ವರ್ಗದಲ್ಲಿ ಮೇಲಿನ ಐದು ಹೊರತುಪಡಿಸಿದ ಕೈಗಾರಿಕೆ ಮತ್ತಿತರೆ ಸಹಕಾರಿ ವಲಯಗಳಿಂದ ಪ್ರತಿನಿಧಿಗಳು ಈ ಚುನಾವಣೆಗೆ ಸ್ಪರ್ಧಿಸಬಹುದು ಮತ್ತು ಮತದಾನ ಮಾಡಬಹುದು.



ನಾನು ನಿರ್ದೇಶಕ ಸ್ಥಾನಕ್ಕೆ ಸ್ವರ್ಧೆ ಮಾಡಿದ್ದು ನನ್ನ ನಾಮಪತ್ರವನ್ನು ಚುನಾವಣೆ ಪ್ರಕ್ರಿಯೆಯಲ್ಲಿ ಸಹಕಾರ ಸಂಘ ಅನರ್ಹ ಕಾರಣಕ್ಕೆ ತಿರಸ್ಕೃತ ಮಾಡಬಾರದು. ನಮ್ಮ ನಾಮಪತ್ರ ಅಂಗೀಕಾರ ಮಾಡಿ ಎಂದು ಡಿಸಿಸಿ ಬ್ಯಾಂಕ್ ಚುನಾವಣೆ ಪ್ರಕ್ರಿಯೆ ನಡೆಸುವ ಅಧಿಕಾರಿಗಳಿಗೆ ಹೈಕೋರ್ಟ್ ಸೂಚನೆ ನೀಡಿದ್ದು. ನಮಗೆ ನ್ಯಾಯ ದೊರಕುವ ವಿಶ್ವಾಸವಿದೆ.

» **ಟಿ.ರಘುಮೂರ್ತಿ ಶಾಸಕರು ಮತ್ತು ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷ**

### ಟಿ.ರಘುಮೂರ್ತಿ ದೂರವಿಡಲು ಪ್ಲಾನ್

ಕಳೆದ ಬಾರಿ ಡಿಸಿಸಿ ಬ್ಯಾಂಕ್ ನಿಂದ ನಿರ್ದೇಶಕರಾಗಿ ಆಯ್ಕೆ ಆಗಿದ್ದ ಟಿ.ರಘುಮೂರ್ತಿ ಅವರು ಈ ಬಾರಿ ಸಹ ಚುನಾವಣೆಗೆ ಸ್ವರ್ಧೆ ಬಯಸಿದ್ದರು ಆದರೆ ಅಧ್ಯಕ್ಷ ಸ್ಥಾನಕ್ಕೆ ಪೈಪೋಟಿ ನೀಡಬಹುದು ಎಂಬ ಕಾರಣಕ್ಕೆ ಅವರ ಆಯ್ಕೆ ಆಗುತ್ತಿದ್ದ ಸೊಸೈಟಿಯನ್ನು ರದ್ದು ಮಾಡಿದ್ದಾರೆ ಎಂಬ ಮಾತು ಡಿಸಿಸಿ ಬ್ಯಾಂಕ್ ಚುನಾವಣೆಯಲ್ಲಿ ಕೇಳಿ ಬರುತ್ತದೆ.

### ಆಡಳಿತ ಸರ್ಕಾರ ಇದ್ದರು ಸ್ವ ಪಕ್ಷದ ಶಾಸಕರಿಗೆ ಮತದಾನ ಭಾಗ್ಯವಿಲ್ಲ

ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಡಿಸಿಸಿ ಬ್ಯಾಂಕ್ ಅಧ್ಯಕ್ಷರಾಗಿದ್ದಾರೆ. ಶಾಸಕ ಟಿ.ರಘುಮೂರ್ತಿ ಮತ್ತು ಸುಧಾಕರ್ ಒಂದೇ ಪಕ್ಷದವರು ಆದರು ಸಹ ರಘುಮೂರ್ತಿ ಗಮನಕ್ಕೆ ಬಾರದೇ ತಮ್ಮ ಪಕ್ಷದ ಶಾಸಕರ ಮತ ರದ್ದಾಗಿರುತ್ತದೆ ಎಂಬ ಮಾಹಿತಿ ಸುಧಾಕರ್ ಅವರಿಗೆ ಇರಲಿಲ್ವ? ಅಥವಾ ರಾಜಕೀಯ ದಾಳ ಉರುಳಿಸಿದರಾ ಎಂಬುದು ಭಾರೀ ಚರ್ಚೆಗೆ ಗ್ರಾಸವಾಗಿದೆ. ಬ್ಯಾಂಕಿನ ಚುನಾವಣೆ ವೇಳೆ ಅವರದ್ದೇ ಪಕ್ಷದ ಶಾಸಕರಿಗೆ ಮತದಾನಕ್ಕೆ ಅವಕಾಶ ಇಲ್ಲದಂತಾಗಿದ್ದು ಈಗ ಕೋರ್ಟ್ ಮೆಟ್ಟಿಲು ಏರಿರುವ ಶಾಸಕ ಟಿ.ರಘುಮೂರ್ತಿ ನಾಮಪತ್ರ ಅಂಗಿಕಾರಕ್ಕೆ ಹೈಕೋರ್ಟ್ ಸೂಚನೆ ನೀಡಿದ್ದು ಈಗ ಹೊಸ ಸ್ವರೂಪ ಪಡೆದುಕೊಂಡಿದೆ.

### ಮತದಾನ ರದ್ದಿಗೆ ಕಾರಣಗಳು

ವರ್ಷದಲ್ಲಿ ಕನಿಷ್ಟ 2 ಸಾಮಾನ್ಯ ಸಭೆಗಳಿಗೆ ಹಾಜರಾಗಿರಬೇಕು. ಕನಿಷ್ಟ 2 ವರ್ಷ ಡಿಸಿಸಿ ಬ್ಯಾಂಕಿನಲ್ಲಿ ಸೊಸೈಟಿಗಳು ವಹಿವಾಟು ನಡೆಸಿರಬೇಕು. ಇದೆಲ್ಲದರ ಜೊತೆಗೆ ಆಡಳಿತ ಮಂಡಳಿ ಇಲ್ಲದೆ ಕೇವಲ ಆಡಳಿತಾಧಿಕಾರಿ ನಡೆಸಿಕೊಂಡು ಹೋಗುತ್ತಿರುವ ಸೊಸೈಟಿಗಳು ಮತದಾನ ಪ್ರಕ್ರಿಯೆಯಲ್ಲಿ ಭಾಗವಹಿಸಲು ಅರ್ಹವಲ್ಲ ಎಂಬ ನಿಯಮಗಳಿವೆ. ಶಾಸಕ ಟಿ. ರಘು ಮೂರ್ತಿ ಪ್ರತಿನಿಧಿಸುವ ಕಡಬನಕಟ್ಟೆ ಕೃಷಿ ಪತ್ತಿನ ಸಹಕಾರ ಸಂಘ ಬೈಲಾ ಪ್ರಕಾರ ಬ್ಯಾಂಕಿನೊಡನೆ ವ್ಯವಹಾರ ನಡೆಸಿಲ್ಲ ಎಂದು ಕಾರಣ ನಮೂದು ಮಾಡಲಾಗಿದೆ. ನಾಮಪತ್ರ ಸಲ್ಲಿಕೆಗೆ ಇಂದು ಕಡೆಯ ದಿನವಾಗಿದ್ದು ಶಾಸಕ ಟಿ.ರಘುಮೂರ್ತಿ ಅವರು ಷರ ಬರೆದು ನಾಮಪತ್ರ ಸಲ್ಲಿಸಿದ್ದರು. ಇದರ ಜೊತೆಗೆ 16 ಸೊಸೈಟಿಗಳು ಕೋರ್ಟ್ ಮೆಟ್ಟಿಲು ಏರಿದ್ದರಿಂದ ಹೈಕೋರ್ಟ್ ಸೂಚನೆಯಿಂದ ಶಾಸಕ ಟಿ. ರಘುಮೂರ್ತಿ ಚುನಾವಣೆ ಅಖಾಡದಲ್ಲಿದ್ದು ಸೆಪ್ಟೆಂಬರ್ 9 ಕ್ಕೆ ಕೋರ್ಟ್ ದಿನಾಂಕ ನೀಡಿದ್ದು ಒಂದು ಹಂತಕ್ಕೆ ರಘುಮೂರ್ತಿ ಅವರಿಗೆ ಮುನ್ನಡೆಯಾಗಿದೆ.

## ಪ್ರಮುಖ ಸುದ್ದಿ

# ಕೋಟೆ ನಾಡಿಗೆ ಎಂಟ್ರಿ ಭರ್ಜರಿ ಕೊಟ್ಟ ಜುಪಿಟರ್ 100 ಸಿಸಿ ಸ್ಕೂಟಿ

## ಸ್ಕೂಟಿಯ ಕಲರ್ ನೋಡಿ ಮನಸೋತ ಗ್ರಾಹಕರು

» ನಮ್ಮಜನ. ಸಮಾಚಾರ



ಚಿತ್ರದುರ್ಗ: ಚಿತ್ರದುರ್ಗ ನಗರದ ತುರುವನೂರು ರಸ್ತೆಯಲ್ಲಿನ ಶ್ರೀ ಅಹೋಬಲ ಟಿವಿಎಸ್ ನಲ್ಲಿ ಇಂದು ನೂನವಾಗಿ ಮಾರುಕಟ್ಟೆಗೆ ಆಗಮಿಸಿರುವ ಜುಪಿಟರ್ 110 ಸಿಸಿಯ ಆಕರ್ಷಕ ಸ್ಕೂಟಿಯನ್ನು ಚಿತ್ರದುರ್ಗ ಪ್ರಾದೇಶಿಕ ಸಾರಿಗೆ ಅಧಿಕಾರಿ ಭರತ ಎಂ ಕಾಳಿಸಂಗೆ ಇಂದು ಬಿಡುಗಡೆಗೊಳಿಸಿದರು.

ಜುಪಿಟರ್ 110 ಸಿಸಿ ಯ ಸ್ಕೂಟಿ ಹೊಚ್ಚ ಹೊಸ ಟಿವಿಎಸ್ ಜುಪಿಟರ್ 110 (ಖಿಗಿಖ ಎಣಠಿಉಣಜಡಿ 110) ಸ್ಕೂಟರ್ ಅತ್ಯಾಕರ್ಷಕ ವಿನ್ಯಾಸವನ್ನು ಪಡೆದಿದೆ. ಮುಂಭಾಗ (ಫ್ರಂಟ್) ವಿನೂತನವಾಗಿರುವ ಎ□□□ಡಿ ಹೆಡ್‌ಲ್ಯಾಂಪ್, ಟರ್ನ್ ಇಂಡಿಕೇಟರ್‌ನೊಂದಿಗೆ ವಿಶಾಲವಾಗಿರುವ (ವೈಡ್) ಎ□□□ಡಿ ಡಿಆರ್‌ಎಲ್‌ನ್ನು ಪಡೆದಿದೆ. ಹಿಂಭಾಗದ (ರೇರ್) ವಿನ್ಯಾಸವು ಉತ್ತಮವಾಗಿದ್ದು, ಎಮರ್ಜೆನ್ಸಿ ಬ್ರೇಕ್ ವಾರ್ನಿಂಗ್ ಲೈಟ್ ಒಳಗೊಂಡಿರುವ ಎ□□□ಡಿ ಲೈಟ್ ಬಾರ್‌ನ್ನು ಹೊಂದಿದೆ.

ಈ ಜುಪಿಟರ್ 110 ಸ್ಕೂಟರ್ ಹತ್ತಾರು ಅತ್ಯಾಧುನಿಕ ವೈಶಿಷ್ಟ್ಯಗಳನ್ನು ಒಳಗೊಂಡಿದೆ. ನವೀನವಾಗಿರುವ ಡಿಜಿಟಲ್ ಇನ್ಸ್ಟುಮೆಂಟ್ ಕ್ಲಸ್ಟರ್, ಇಂಟಲಿಜೆಂಟ್ ಸ್ಟಾರ್ಟ್/ ಸ್ಟಾಪ್, ಇಂಟಿಗ್ರೇಟೆಡ್ ಸ್ಟಾರ್ಟರ್ ಜನರೇಟರ್, ಯುಎಸ್‌ಬಿ ಚಾರ್ಜರ್, 2 ಲೀಟರ್ ಗ್ಲೋವ್ ಬಾಕ್ಸ್, 33 ಲೀಟರ್ ಸಾಮರ್ಥ್ಯದ ಅಂಡರ್ ಸೀಟ್ ಸ್ಟೋರೇಜ್ ಅನ್ನು ಹೊಂದಿದೆ.

ನೂತನ ಟಿವಿಎಸ್ ಜುಪಿಟರ್ 110 ಸ್ಕೂಟರ್ ಸುರಕ್ಷತೆಯ ದೃಷ್ಟಿಯಿಂದ ಮುಂಭಾಗ (ಫ್ರಂಟ್) 220 ಎಂಎಂ ಪೆಟಲ್ ಡಿಸ್ಕ್ ಮತ್ತು ಹಿಂಭಾಗ (ರೇರ್) 130 ಎಂಎಂ ಡ್ರಮ್ ಬ್ರೇಕ್‌ನ್ನು ಪಡೆದಿದೆ. ಹಾಗೆಯೇ, ಮುಂದೆ ಟೆಲಿಸ್ಕೋಪಿಕ್ ಫೋರ್ಕ್ ಹಾಗೂ ಹಿಂದೆ ಗ್ಯಾಸ್ ಫೀಲ್ಡ್ ಡ್ಯಾಂಪರ್ ಸಸ್ಪೆನ್ಷನ್ ಸೆಟಪ್ ಹೊಂದಿದೆ. 12–ಇಂಚಿನ ಅಲಾಯ್ ವೀಲ್‌ಗಳನ್ನು ಒಳಗೊಂಡಿದ್ದು, ಟೈರ್‌ಗಳು ಕೂಡ ಉತ್ತಮವಾಗಿವೆ.

**ವೈಶಿಷ್ಟ್ಯ ಹಾಗೂ ಬಣ್ಣಗಳು:** ಹೊಚ್ಚ ಹೊಸ ಟಿವಿಎಸ್ ಜುಪಿಟರ್ 110 ಸ್ಕೂಟರ್ ಹಲವು ಅತ್ಯಾಕರ್ಷಕ ವೈಶಿಷ್ಟ್ಯಗಳನ್ನು ಒಳಗೊಂಡಿದೆ. ಇಂಟಲಿಜೆಂಟ್ ಸ್ಟಾರ್ಟ್–ಸ್ಟಾಪ್, ಇಂಟಿಗ್ರೇಟೆಡ್ ಸ್ಟಾರ್ಟರ್ ಜನರೇಟರ್, ನೂತನವಾಗಿರುವ ಡಿಜಿಟಲ್ ಇನ್ಸ್ಟುಮೆಂಟ್ ಕ್ಲಸ್ಟರ್‌ನ್ನು ಪಡೆದಿದೆ. ಇದು ಕಾಲ್, ಟೆಕ್ಸ್ಟ್ ನೋಟಿಫಿಕೇಶನ್, ಫ್ಯುಯೆಲ್ ಎಕಾನಮಿ, ನ್ಯಾವಿಗೇಷನ್ ಸೇರಿದಂತೆ ಇನ್ನಿತರೇ ಮಾಹಿತಿಯನ್ನು ಸವಾರರಿಗೆ ಒದಗಿಸುತ್ತದೆ.

**ಜುಪಿಟರ್ 100 ಸಿಸಿ ಮೂರು ಮಾಡೆಲ್ ಸ್ಕೂಟಿ ಬೆಲೆ :** ಎಕ್ಸ್ ಶೋ ರೂಂ ಬೆಲೆ– 77400, 86150, 90150 ಮೂರು ಬೆಲೆಯಲ್ಲಿ ಮಾರುಟ್ಟೆಗೆ ಲಗ್ಗೆ ಇಟ್ಟಿದೆ. ಈ ಸಂದರ್ಭದಲ್ಲಿ ಟಿವಿಎಸ್ ಕಂಪನಿಯ ಟೆರೇಟೋರಿ ಮ್ಯಾನೇಜರ್ ಉಮಾ ಮತ್ತು ಅಭಿಷೇಕ್, ಶ್ರೀ ಅಹೋಬಲ ಟಿವಿಎಸ್ ಮಾಲೀಕ ಪಿ.ವಿ.ಅರುಣ್ ಕುಮಾರ್ ಗ್ರಾಂಡ್ ಲಾಂಚ್ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಇಂಡಿಯಾನ್ ಬುಕ್ ಆಫ್ ರೇಕಾರ್ಡ್ ಹೆಸರು ದಾಖಲಿಸಿದ ಶಾಸಕ ವೀರೇಂದ್ರ ಪುತ್ರಿ ಸರಸ್ವತಿ

» ಚಳ್ಳಕೆರೆ

ಚಳ್ಳಕೆರೆ ನಗರದ ವರಪುತ್ರ, ಚಿತ್ರದುರ್ಗ ಕ್ಷೇತ್ರದ ಶಾಸಕ ಕೆ.ಸಿ.ವೀರೇಂದ್ರ(ಪಪ್ಪಿ) ರಾಜಕೀಯ ಕ್ಷೇತ್ರದಲ್ಲಿ ತಮ್ಮದೇಯಾದ ..ಛಾಪನ್ನು ಮೂಡಿಸಿದ್ದು, ಇವರ ಪುತ್ರಿ ಕೆಸಿವಿ ಸರಸ್ವತಿ(14) ತನ್ನ ತಂದೆಯಂತೆ ತಾನು ಸಹ ದಾಖಲೆ ಸ್ಥಾಪಿಸುವಲ್ಲಿ ಯಶಸ್ವಿಯ ಹೆಜ್ಜೆ ಇಟ್ಟಿದ್ದಾಳೆ. ಇವರ ಸಾಧನೆಗೆ ಎಲ್ಲೆಡೆಯಿಂದ ಮೆಚ್ಚುಗೆಯ ಮಾತುಗಳು ಕೇಳಿಬಂದಿವೆ.




ಶಾಸಕ ವೀರೇಂದ್ರ(ಪಪ್ಪಿ)ಯವರ ಪುತ್ರಿ ಕೆಸಿವಿ ಸರಸ್ವತಿ ಚಿತ್ರದುರ್ಗದ ಡಾನ್‌ಬಾಸ್ಕೊಶಾಲೆಯಲ್ಲಿ

ಅಭ್ಯಾಸ ಮಾಡುತ್ತಿದ್ದು, ಇತ್ತೀಚೆಗಷ್ಟೇ 2.30 ಗಂಟೆಗಳ ಕಾಲ ವಾಲ್‌ಸ್ಟಿಕ್(ಗೋಡೆಗೆ ಒರಗಿ ಕುರ್ಚಿಯ ಮೇಲೆ ಕುಳಿತ ಭಂಗಿ) ಮಾಡುವ ಮೂಲಕ ಇಂಡಿಯಾನ್ ಬುಕ್ ಆಫ್ ರೇಕಾರ್ಡ್–2024ನಲ್ಲಿ ಸ್ಥಾನ ಪಡೆದಿದ್ದಾಳೆ.

ಈ ಬಗ್ಗೆ ಪತ್ರಿಕೆಯೊಂದಿಗೆ ಮಾತನಾಡಿದ ಕೆಸಿವಿ ಸರಸ್ವತಿ, ಕೇಳದ ಸಮುದ್‌ರವರ ಮಾರ್ಗದರ್ಶ, ತರಬೇತಿಯಲ್ಲಿ ನಾನು ಈ ಸಾಧನೆ ಮಾಡಲು ಸಾಧ್ಯವಾಯಿತು.




## ಫಾಸ್ಟ್ ನ್ಯೂಸ್

### ಸಮೃದ್ಧಿ ಜೀವನ ಸೊಸೈಟಿಯಿಂದ ವಂಚನೆ: ಉಪಾಧೀಕ್ಷಕರ ಸಂಪರ್ಕಿಸಲು ಕೋರಿಕೆ

» **ಚಿತ್ರದುರ್ಗ**

ಚಿತ್ರದುರ್ಗ ನಗರದಲ್ಲಿ 2009 ರಿಂದ 2015 ರವರೆಗಿನ ಮಧ್ಯದ ಅವಧಿಯಲ್ಲಿ ಶ್ರೀನಾಥ್ ಬಿಲ್ಡಿಂಗ್‌ನಲ್ಲಿ ಪುಣೆ ಮೂಲದ "ಸಮೃದ್ಧ ಜೀವನ ಫುಡ್ಸ್ ಹಾಗೂ ಸಮೃದ್ಧ ಜೀವನ ಮಲ್ಟಿಸ್ಟೇಟ್ ಮಲ್ಟಿ ಪರ್ಪಸ್ ಕೋ ಆಪರೇಟಿವ್ ಸೊಸೈಟಿ ಸಂಸ್ಥಾಪರಾದ ಮಹೇಶ್ ಕಿಸಾನ್ ಮೊತ್ತೆದಾರ್ ಹಾಗೂ ಇನ್ನಿತರರು ಸೇರಿಕೊಂಡು ಸಾರ್ವಜನಿಕರಿಂದ ಐದುವರೆ ವರ್ಷದಲ್ಲಿ ಹಣವನ್ನು ದ್ವಿಗುಣ ಮಾಡಿಕೊಡುವುದಾಗಿ ಹೇಳಿ ನಂಬಿಸಿ ಮೋಸದಿಂದ ಹಣವನ್ನು ಠೇವಣಿ ಮಾಡಿಸಿಕೊಂಡು ನಂತರ ದ್ವಿಗುಣ ಹಣ ನೀಡುವ ಸಮಯ ಬಂದಾಗ ಸೊಸೈಟಿಯನ್ನು ಮುಚ್ಚಿಕೊಂಡು ಹೋಗಿ ಕೋಟ್ಯಾಂತರ ರೂಪಾಯಿ ವಂಚಿಸಿದ್ದಾಗಿ ನೀಡಿದ ದೂರಿನ ಮೇರೆಗೆ ಚಿತ್ರದುರ್ಗ ನಗರದ ಸಿ.ಇ.ಎನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿ, ಪ್ರಸ್ತುತ ಬೆಂಗಳೂರಿನ ಸಿ.ಐ.ಡಿ ತನಿಖೆಯಲ್ಲಿದೆ. ಸಾರ್ವಜನಿಕರು "ಸಮೃದ್ಧ ಜೀವನ ಫುಡ್ಸ್ ಹಾಗೂ ಸಮೃದ್ಧ ಜೀವನ ಮಲ್ಟಿಸ್ಟೇಟ್ ಮಲ್ಟಿ ಪರ್ಪಸ್ ಕೋ ಆಪರೇಟಿವ್ ಸೊಸೈಟಿಯಲ್ಲಿ ಹಣ ಠೇವಣಿ, ಹೂಡಿಕೆ ಮಾಡಿದ್ದು, ಅವಧಿ ಪೂರ್ಣ ನಂತರದಲ್ಲಿ ಈ ಕಂಪನಿ ಅಥವಾ ಸೊಸೈಟಿಯವರು ಹಣ ಮರುಪಾವತಿ ಮಾಡದೇ ಇದ್ದ ಪಕ್ಷದಲ್ಲಿ ಅಂತಹ ವ್ಯಕ್ತಿಗಳು ತಮಗೆ ಕಂಪನಿ, ಸೊಸೈಟಿಯವರು ಹಣ ಪಡೆದು ನೀಡಿದ್ದ ಬಾಂಡ್, ರಸೀದಿ ಇತ್ಯಾದಿ ಎಲ್ಲಾ ಮೂಲ ದಾಖಲಾತಿಗಳೊಂದಿಗೆ ವಾರದೊಳಗೆ ಬೆಂಗಳೂರು ಅರಮನೆ ರಸ್ತೆ, ಸಿ.ಐ.ಡಿ ಮುಖ್ಯ ಕಚೇರಿಯ ಆರ್ಥಿಕ ಅಪರಾಧಗಳ ವಿಭಾಗದ ಪೊಲೀಸ್ ಉಪಾಧೀಕ್ಷಕರನ್ನು ಅಥವಾ ದೂರವಾಣಿ ಸಂಖ್ಯೆ 080-22094469 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ಅವಧಿ ಮೀರಿದ ಗ್ರಾಹಕರ ವ್ಯಾಜ್ಯಗಳ ಕಡತ ನಾಶಕ್ಕೆ ಕ್ರಮ

» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗಕ್ಕೆ ಸಂಬಂಧಿಸಿದ ಅವಧಿ ಮೀರಿದ ಗ್ರಾಹಕರ ವ್ಯಾಜ್ಯಗಳ Consumer Complaint - C.C) ಅಮಾಲ್ಜಾರಿ ಅರ್ಜಿಗಳ (Execution Application) ಹಾಗೂ ಸಂಕೀರ್ಣ ಅರ್ಜಿಗಳ (Miscellanceous Petitions) ಕಡತಗಳನ್ನು ನಿಯಮಾನುಸಾರ ನಾಶಗೊಳಿಸಲು ಕ್ರಮವಹಿಸಲಾಗಿದೆ. ಈ ಆಯೋಗದಲ್ಲಿನ 2015ನೇ ಸಾಲಿನಿಂದ 2019ನೇ ಸಾಲಿನವರೆಗೆ ವಿವಿಧ ಕಡತಗಳನ್ನು ನಾಶಗೊಳಿಸಲು ಕ್ರಮ ಕೈಗೊಳ್ಳಬೇಕಾಗಿರುವುದರಿಂದ, ಈ ಕಡತಗಳಲ್ಲಿರುವ ಮೂಲ ದಾಖಲೆಗಳನ್ನು ಈ ಸುತ್ತೋಲೆ ಹೊರಡಿಸಿದ ದಿನಾಂಕದಿಂದ ಎರಡು ತಿಂಗಳ ಅವಧಿಯೊಳಗೆ ಹಿಂಪಡೆದುಕೊಳ್ಳುವಂತೆ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಸಹಾಯಕ ರಿಜಿಸ್ಟ್ರಾರ್ ಹಾಗೂ ಸಹಾಯಕ ಆಡಳಿತಾಧಿಕಾರಿ ಸಿ.ಎ.ರೇಷ್ಮಾಖಾನಮ್ ತಿಳಿಸಿದ್ದಾರೆ.

### ಸೆ.೯ರಿಂದ ಇ-ಆಸ್ತಿ ಆಧಾರಿತ ನೊಂದಣಿ ವ್ಯವಸ್ಥೆ ಜಾರಿ

» **ಚಿತ್ರದುರ್ಗ**

ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯ ಸ್ವತ್ತುಗಳ ನೊಂದಣಿಗೆ ಸಂಬಂಧಿಸಿದಂತೆ ಇದೇ ಸೆ.9 ರಿಂದ ಜಾರಿಗೆ ಬರುವಂತೆ ಇ-ಆಸ್ತಿ ದಾಖಲೆ ಕಡ್ಡಾಯಗೊಳಿಸಿ ಸರ್ಕಾರ ಆದೇಶಿಸಿದೆ. ಆದ್ದರಿಂದ ಸಾರ್ವಜನಿಕರು ಚಿತ್ರದುರ್ಗ ನಗರ, ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯ ಸ್ವತ್ತುಗಳ ನೊಂದಣಿಗಾಗಿ ಇ-ಆಸ್ತಿ ಸಲ್ಲಿಸುವುದು ಕಡ್ಡಾಯವಾಗಿದೆ ಎಂದು ಜಿಲ್ಲಾ ನೊಂದಣಾಧಿಕಾರಿ ರವೀಂದ್ರ ಎಲ್ ಪೂಜಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬೆಂಬಲಬೆಲೆಯಲ್ಲಿ ಸೂರ್ಯಕಾಂತಿ ಖರೀದಿ ಕೇಂದ್ರಗಳ ಸ್ಥಾಪನೆ

» **ಚಿತ್ರದುರ್ಗ**

2024-25ನೇ ಸಾಲಿಗೆ ಕೇಂದ್ರ ಸರ್ಕಾರದ ಬೆಂಬಲಬೆಲೆ ಯೋಜನೆಯಡಿ ನಿಗದಿಪಡಿಸಿರುವ ರೂ.7,280/- (ಪ್ರತಿ ಕ್ವಿಂಟಾಲ್‌ಗೆ) ಸೂರ್ಯಕಾಂತಿಯನ್ನು ಖರೀದಿಸಲು, ಜಿಲ್ಲಾ ಟಾಸ್ಕ್ ಪೋರ್ಸ್ ಸಮಿತಿ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿಗಳ ಆದೇಶದಂತೆ ಸೂರ್ಯಕಾಂತಿ ಖರೀದಿ ಕೇಂದ್ರಗಳನ್ನು ತೆರೆಯಲಾಗಿದೆ. ಹಿರಿಯೂರು ತಾಲ್ಲೂಕಿನ ಯರಬಳ್ಳಿ/ಐಮಂಗಲ, ಧರ್ಮಪುರ ಎಣ್ಣೆಬೀಜ ಬೆಳೆಗಾರರ ಸಹಕಾರ ಸಂಘ ಹಾಗೂ ಹಿರಿಯೂರು ಎ.ಪಿ.ಎಂ.ಸಿ, ಚಳ್ಳಕೆರೆ ತಾಲ್ಲೂಕಿನ ರಾಮಜೋಗಿಹಳ್ಳಿ, ದೇವರೆಡ್ಡಿಹಳ್ಳಿ ಎಣ್ಣೆಬೀಜ ಬೆಳೆಗಾರರ ಸಹಕಾರ ಸಂಘ ಮತ್ತು ಚಳ್ಳಕೆರೆ ಎ.ಪಿ.ಎಂ.ಸಿ ಹಾಗೂ ಚಿತ್ರದುರ್ಗ ತಾಲ್ಲೂಕಿನ ತುರುವನೂರಿನ ಎಣ್ಣೆಬೀಜ ಬೆಳೆಗಾರರ ಸಹಕಾರ ಸಂಘದಲ್ಲಿ ಸೂರ್ಯಕಾಂತಿ ಖರೀದಿ ಕೇಂದ್ರಗಳನ್ನು ತೆರೆಯಲಾಗಿದೆ. ರೈತರು ಸದುಪಯೋಗಪಡಿಸಿಕೊಳ್ಳಬೇಕು ಎಂದು ಚಿತ್ರದುರ್ಗ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಕಾರ್ಯದರ್ಶಿ ತಿಳಿಸಿದ್ದಾರೆ.

# ಪರಿಸರ ಸ್ನೇಹಿ ಗೌರಿಗಣೇಶ ಹಬ್ಬ ಆಚರಿಸಿ: ಡಿಸಿ

» **ಚಿತ್ರದುರ್ಗ**

ಪರಿಸರ ಸ್ನೇಹಿ ಗೌರಿಗಣೇಶ ಹಬ್ಬ ಆಚರಿಸಿ ನೈಸರ್ಗಿಕ ಜಲಸಂಪನ್ಮೂಲಗಳನ್ನು ಸಂರಕ್ಷಿಸಲು ಜಿಲ್ಲೆಯ ಸಾರ್ವಜನಿಕರು ಸಹಕರಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಪರಿಸರ ಸ್ನೇಹಿ ಗೌರಿ ಗಣೇಶ ಹಬ್ಬ ಆಚರಿಸಲು ಪಾಲಿಸಬೇಕಾದ ಮಾರ್ಗಸೂಚಿಗಳನ್ನು ಪರಿಸರ ಹಾಗೂ ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಪಾಲಿಸಿ ಪರಿಸರ ಸ್ನೇಹಿ ಗೌರಿಗಣೇಶ ಹಬ್ಬ ಆಚರಿಸುವಂತೆ ಜಿಲ್ಲೆಯ ಸಾರ್ವಜನಿಕರಲ್ಲಿ ಕೋರಿದ್ದಾರೆ.

ಪ್ರತಿ ವರ್ಷದಂತೆ ಈ ಬಾರಿಯು ಸ್ವರ್ಣ ಗೌರಿ ಹಾಗೂ ವರಸಿದ್ಧಿ ವಿನಾಯಕ ಚತುರ್ಥಿ ಹಬ್ಬವು ಸಮೀಪಿಸುತ್ತಿದ್ದು, ಈ ಸಂದರ್ಭದಲ್ಲಿ ಸಾರ್ವಜನಿಕರು ಪ್ಲಾಸ್ಟರ್ ಆಫ್ ಪ್ಯಾರಿಸ್ (ಪಿ.ಒ.ಪಿ) ಮತ್ತು ಬಣ್ಣದ ವಿಗ್ರಹಗಳನ್ನು ಸ್ಥಾಪಿಸಿ ಪೂಜಿಸಿದ ನಂತರ ಕೆರೆ, ಬಾವಿ ಹಾಗೂ ಇನ್ನಿತರೆ ನೈಸರ್ಗಿಕ ಜಲಮೂಲಗಳಿಗೆ ವಿಸರ್ಜಿಸುವುದರಿಂದ ನೈಸರ್ಗಿಕ ಜಲಮೂಲಗಳು ಕಲುಷಿತಗೊಂಡು ಇವುಗಳ ಭೌತಿಕ ಹಾಗೂ ರಾಸಾಯನಿಕ ಗುಣಗಳು ಮಾರ್ಪಟ್ಟು ಪರಿಸರದ ಮೇಲೆ ದುಷ್ಪರಿಣಾಮ ಉಂಟಾಗುವುದಲ್ಲದೆ ಪ್ರಾಣಿ, ಪಕ್ಷಿ ಹಾಗೂ ಜಲಚರಗಳ ಜೀವಕ್ಕೆ ಅಪಾಯವಾಗುತ್ತದೆ. ಅಲ್ಲದೆ ಸಾರ್ವಜನಿಕ ಆರೋಗ್ಯಕ್ಕೂ ದಕ್ಕೆ ಉಂಟಾಗುತ್ತದೆ. ಹಾಗಾಗಿ ನೀರಿನ ಮೂಲಗಳಾದ ನದಿ,ತೊರೆ,ಹಳ್ಳ,ಬಾವಿ ಇವುಗಳು ಮಾಲಿನ್ಯಕ್ಕೊಳಗಾಗದಂತೆ ಸಂರಕ್ಷಿಸುವ ಉದ್ದೇಶದಿಂದ ಭಾರಲೋಹ ಮಿಶ್ರಿತ ರಾಸಾಯನಿಕಯುಕ್ತ ಬಣ್ಣದಿಂದ ಅಲಂಕೃತಗೊಂಡಂತಹ ಯಾವುದೇ ರೀತಿಯ ಪ್ಲಾಸ್ಟರ್ ಆಫ್ ಪ್ಯಾರಿಸ್‌ನಿಂದ ತಯಾರಿಸಿದ ವಿಗ್ರಹಗಳ ಉತ್ಪಾದನೆ, ಮಾರಾಟ ಹಾಗೂ ಅವುಗಳನ್ನು ಮೇಲೆ ತಿಳಿಸಿದ ಯಾವುದೇ ನೀರಿನ ಮೂಲಗಳಲ್ಲಿ ವಿಸರ್ಜಿಸುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ.



ಪ್ಲಾಸ್ಟರ್ ಆಫ್ ಪ್ಯಾರಿಸ್ ಮತ್ತು ಬಣ್ಣ ಲೇಪಿತವಾದ ವಿಗ್ರಹಗಳನ್ನು ತಯಾರಿಸಬಾರದೆಂದು ಹಾಗೂ ರಾಜ್ಯದ ಯಾವುದೇ ಜಲ ಮೂಲಗಳಲ್ಲಿ ಪ್ಲಾಸ್ಟರ್ ಆಫ್ ಪ್ಯಾರಿಸ್ ಮತ್ತು ರಾಸಾಯನಿಕಯುಕ್ತ ಬಣ್ಣ ಲೇಪಿತ ವಿಗ್ರಹಗಳನ್ನು ವಿಸರ್ಜಿಸುವುದನ್ನು ನಿಷೇಧಿಸಲಾಗಿದೆ. ಈ ಆದೇಶ ಉಲ್ಲಂಘಿಸಿದ್ದಲ್ಲಿ ಕಾನೂನು ರೀತ್ಯಾ ಕ್ರಮ ತೆಗೆದುಕೊಳ್ಳಲಾಗುವುದು.

ಗೌರಿಗಣೇಶ ಹಬ್ಬದ ಸಂದರ್ಭದಲ್ಲಿ ಬಣ್ಣ ರಹಿತ ಮಣ್ಣಿನ, ನೈಸರ್ಗಿಕ ಮೂರ್ತಿಗಳೊಂದಿಗೆ ಹಬ್ಬ ಆಚರಿಸಿ ತದನಂತರ ಗೌರಿಗಣೇಶ ಮೂರ್ತಿಗಳನ್ನು ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ, ಗ್ರಾಮ ಪಂಚಾಯಿತಿ ವತಿಯಿಂದ ನಿಗಧಿಪಡಿಸಿರುವ ಸ್ಥಳಗಳಲ್ಲಿ ಮೂರ್ತಿಗಳನ್ನು ವಿಸರ್ಜಿಸುವುದು.

ಗೌರಿಗಣೇಶ ಮೂರ್ತಿಗಳನ್ನು ವಿಸರ್ಜಿಸುವ ಸಂದರ್ಭದಲ್ಲಿ ಹಸಿ ಕಸ (ಹೂ, ಹಣ್ಣು, ಬಾಳೆ ಕಂಬ, ಮಾವಿನ ತೋರಣ ಇತ್ಯಾದಿ ಅಲಂಕಾರಿಕ ವಸ್ತುಗಳು) ಪ್ರತ್ಯೇಕಿಸಿ ಮೂರ್ತಿಗಳೊಂದಿಗೆ ನೀರಿಗೆ ವಿಸರ್ಜಿಸದೇ ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ, ಗ್ರಾಮ ಪಂಚಾಯಿತಿಯ ಕಸ ಸಂಗ್ರಹಣ ವಾಹನಕ್ಕೆ ನೀಡುವುದು. ಸಾರ್ವಜನಿಕವಾಗಿ ನಡೆಸುವ ಗಣೇಶ ಮೂರ್ತಿಯ ಉತ್ಸವದ ಚಪ್ಪರಕ್ಕೆ ಪರಿಸರ ಸ್ನೇಹಿ ವಸ್ತುಗಳನ್ನೇ ಬಳಸಿ, ನಿಷೇಧಿತ ಪ್ಲಾಸ್ಟಿಕ್ ವಸ್ತುಗಳ ಬಳಕೆ ಮಾಡಬಾರದು.

ಸಾರ್ವಜನಿಕವಾಗಿ ಗಣೇಶ ಹಬ್ಬದ ಸಮಯದಲ್ಲಿ ಶಬ್ದ ಮಾಲಿನ್ಯ (ನಿರ್ಬಂಧ ಮತ್ತು ನಿಯಂತ್ರಣ) ನಿಯಮಗಳು 2000 ಅಡಿಯಲ್ಲಿ ವ್ಯಾಖ್ಯಾನಿಸಲಾದ ನಿಯೋಜಿತ ಪ್ರಾಧಿಕಾರದಿಂದ ಲಿಖಿತ ಅನುಮತಿ ಪಡೆಯದ ಹೊರತು ಧ್ವನಿವರ್ಧಕ, ಸಾರ್ವಜನಿಕ ಗಣೇಶ ಪೆಂಡಾಲುಗಳಲ್ಲಿ ಬಳಸುವ ವಿದ್ಯುನ್ಮಾನ ಉಪಕರಣಗಳು ಮತ್ತು ಶಬ್ದ ಉಂಟು ಮಾಡುವ ಉಪಕರಣಗಳನ್ನು ಬಳಸಬಾರದು ಹಾಗೂ ಧ್ವನಿವರ್ಧಕಗಳ ಬಳಕೆಯನ್ನು ರಾತ್ರಿ 10 ಗಂಟೆಯಿಂದ ಬೆಳಿಗ್ಗೆ 6 ಗಂಟೆಯವರೆಗೆ ಸಂಪೂರ್ಣವಾಗಿ ನಿಷೇಧಿಸಲಾಗಿದೆ. ನಿಯಮ ಉಲ್ಲಂಘನೆಯಾದಲ್ಲಿ ಕಾನೂನು ರೀತ್ಯಾ ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

## ಗಣೇಶ ವಿಸರ್ಜನೆಗೆ ನಗರಸಭೆಯಿಂದ ತೊಟ್ಟಿಗಳ ವ್ಯವಸ್ಥೆ: ಪೌರಾಯುಕ್ತೆ

» **ಚಿತ್ರದುರ್ಗ**

ಗಣೇಶ ಮೂರ್ತಿ ವಿಸರ್ಜನೆಗೆ ನಗರದ ಒನಕೆ ಓಬವ್ವ ಕ್ರೀಡಾಂಗಣ ಬಳಿ, ಐಯುಡಿಪಿ ಬಡಾವಣೆ ರಾಜ್ ಕುಮಾರ್ ಪಾರ್ಕ್ ಹತ್ತಿರ, ಕೋಟೆರಸ್ತೆಯ ಏಕನಾಥೇಶ್ವರಿ ಪಾದ ಗುಡಿ ಮುಂಭಾಗ, ಜೆ.ಸಿ.ಆರ್. ಬಡಾವಣೆಯ ಗಣೇಶ ದೇವಸ್ಥಾನದ ಹತ್ತಿರ, ಸಿಹಿ ನೀರು ಹೊಂಡ ಆವರಣ,ಪತಂಜಲಿಆಸ್ಪತ್ರೆಯ ಪಕ್ಕ, ಕೆಳಗೋಟೆಯ ಚನ್ನಕೇಶವ ದೇವಸ್ಥಾನದ ಹತ್ತಿರ, ತುರುವನೂರು ರಸ್ತೆಯ ತಿಪ್ಪೇರುದ್ರಸ್ವಾಮಿ ದೇವಸ್ಥಾನ ಮುಂಭಾಗ, ಗೋಪಾಲಪುರ ನೀರಿನ ಟ್ಯಾಂಕ್ ಹತ್ತಿರ, ಗುಮಸ್ತರ ಕಾಲೋನಿ ರೈತ ಭವನದ ಹತ್ತಿರ, ಜೋಗಿಮಟ್ಟಿ ರಸ್ತೆಯ ತಿಪ್ಪಿನಘಟ್ಟಮ್ಮ ದೇವಸ್ಥಾನದ ಹತ್ತಿರದ ಪಾರ್ಕ್ ಹಾಗೂ ಚಂದ್ರವಳ್ಳಿ ಕೆರೆ ಹತ್ತಿರ ತಾತ್ಕಾಲಿಕ ನೀರಿನ ತೊಟ್ಟಿಗಳನ್ನು ವ್ಯವಸ್ಥೆ ಮಾಡಲಾಗಿದೆ ಎಂದು ನಗರಸಭೆ ಪೌರಾಯುಕ್ತೆ ಎಂ.ರೇಣುಕಾ ತಿಳಿಸಿದ್ದಾರೆ. ಪ್ರಯುಕ್ತ ಪ್ಲಾಸ್ಟರ್ ಆಫ್ ಪ್ಯಾರಿಸ್ ಮತ್ತು ಭಾರಲೋಹ ಮಿಶ್ರಿತ ರಾಸಾಯನಿಕಯುಕ್ತ ಬಣ್ಣದಿಂದ ಅಲಂಕೃತಗೊಂಡಂತಹ ಯಾವುದೇ ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸಬಾರದು.



ಮಣ್ಣಿನಿಂದ ನಿರ್ಮಿಸಿದ ನೈಸರ್ಗಿಕ ಬಣ್ಣ ಬಳಸಿದ ಗಣೇಶ ಮೂರ್ತಿಗಳನ್ನು ಮಾತ್ರ ಪ್ರತಿಷ್ಠಾಪಿಸಿ, ಮೂರ್ತಿಗಳನ್ನು ಪೂಜಿಸಿದ ನಂತರ ಹೊಂಡ, ಕೆರೆ ಭಾವಿಗಳಲ್ಲಿ ವಿಸರ್ಜಿಸಬಾರದು. ಇದರಿಂದ ಜಲ ಮಾಲಿನ್ಯ ಹಾಗೂ ಪರಿಸರ ಮಾಲಿನ್ಯ ಉಂಟಾಗಿ ಜೀವ ರಾಶಿಗಳ ಆರೋಗ್ಯದ ಮೇಲೆ ವ್ಯತಿರಿಕ್ತ ಪರಿಣಾಮ ಉಂಟಾಗುವ ಸಾಧ್ಯತೆ ಇದೆ. ಪರಿಸರಕ್ಕೆ ಧಕ್ಕೆಯಾಗದಂತೆ ಗಣೇಶ ಹಬ್ಬದ ನಂತರ ನಗರ ಸಭೆಯ ತಾತ್ಕಾಲಿಕ ನೀರಿನ ತೊಟ್ಟಿಗಳನ್ನು ಸದ್ಬಳಕೆ ಮಾಡಿಕೊಂಡು ಮೂರ್ತಿ ವಿಸರ್ಜಿಸುವಂತೆ ಪೌರಾಯುಕ್ತೆ ಎಂ.ರೇಣುಕಾ ನಾಗರೀಕರಲ್ಲಿ ಮನವಿ ಮಾಡಿದ್ದಾರೆ.

# 24 ಶಿಕ್ಷಕರಿಗೆ ಜಿಲ್ಲಾಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ

» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಿಂದ ಬಂದ ಉತ್ತಮ ಶಿಕ್ಷಕರ ಪ್ರಸ್ತಾವನೆಗಳನ್ನು ಪರಿಶೀಲನೆ ಮಾಡಿ ಜಿಲ್ಲಾ ಆಯ್ಕೆ ಸಮಿತಿ ಪ್ರಾಥಮಿಕ ಶಾಲಾ ಶಿಕ್ಷಕರು ಹಾಗೂ ಪ್ರೌಢಶಾಲಾ ಶಿಕ್ಷಕರನ್ನು 2024-25ನೇ ಸಾಲಿನ ಉತ್ತಮ ಶಿಕ್ಷಕ ಪ್ರಶಸ್ತಿ ಹಾಗೂ ವಿಶೇಷ ಶಿಕ್ಷಕ ಪ್ರಶಸ್ತಿ ನೀಡಲು ಆಯ್ಕೆ ಮಾಡಲಾಗಿದೆ.

ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪಡೆದ ಶಿಕ್ಷಕರನ್ನು ಸೆ.05ರಂದು ಬೆಳಿಗ್ಗೆ 10ಕ್ಕೆ ನಗರದ ತರಾಸು ರಂಗಮಂದಿರದಲ್ಲಿ ನಡೆಯುವ ಜಿಲ್ಲಾಮಟ್ಟದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಸನ್ಮಾನಿಸಲಾಗುವುದು.

ಪ್ರೌಢಶಾಲಾ ವಿಭಾಗ-6, ಹಿರಿಯ ಪ್ರಾಥಮಿಕ ಶಾಲೆ ವಿಭಾಗ-6, ಕಿರಿಯ ಪ್ರಾಥಮಿಕ ಶಾಲೆ ವಿಭಾಗ-6 ಹಾಗೂ ವಿಶೇಷ ಪ್ರಶಸ್ತಿ ವಿಭಾಗ- ಸೇರಿದಂತೆ ಒಟ್ಟು 24 ಮಂದಿ ಶಿಕ್ಷಕರನ್ನು ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

ಜಿಲ್ಲಾಮಟ್ಟದ ಉತ್ತಮ ಪ್ರಶಸ್ತಿಗೆ ಆಯ್ಕೆಯಾದ ಶಿಕ್ಷಕರ ವಿವರ-ಪ್ರೌಢಶಾಲಾ ವಿಭಾಗ: ಚಿತ್ರದುರ್ಗ ಸರ್ಕಾರಿ ಪದವಿಪೂರ್ವ ಕಾಲೇಜು (ಪ್ರೌಢಶಾಲಾ ವಿಭಾಗ) ಸಹ ಶಿಕ್ಷಕ ಹೆಚ್.ಕೆ.ವಿಜಯ್ ಕುಮಾರ್, ಚಳ್ಳಕೆರೆ ತಾಲ್ಲೂಕು ಮೈಲನಹಳ್ಳಿ ಉನ್ನತೀಕರಿಸಿದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಸಹ ಶಿಕ್ಷಕ ಎನ್.ರಾಧಮಣಿ, ಹೊಸದುರ್ಗ ತಾಲ್ಲೂಕು ದೇವಪುರ ಸರ್ಕಾರಿ ಪದವಿಪೂರ್ವ ಕಾಲೇಜು (ಪ್ರೌಢಶಾಲಾ ವಿಭಾಗ) ಸಹ ಶಿಕ್ಷಕ ಧನಂಜಯ, ಹೊಳಲ್ಕೆರೆ ತಾಲ್ಲೂಕು ರಂಗಾಪುರ ಸ್ವಾತಂತ್ರ್ಯ ಜ್ಯೋತಿ ಪ್ರೌಢಶಾಲೆಯ ಸಹ ಎ.ಆರ್.ಪ್ರವೀಣ್ ಕುಮಾರ್,ಚಳ್ಳಕೆರೆತಾಲ್ಲೂಕುಆದರ್ಶವಿದ್ಯಾಲಯ ಸಹ ಶಿಕ್ಷಕ ಜಿ.ಎಂ.ವೀರಭದ್ರಪ್ಪ, ಮೊಳಕಾಲ್ಮುರು



ಶ್ರೀ ಶ್ರೀನಿವಾಸ ನಾಯಕ ಪ್ರೌಢಶಾಲೆ ಮುಖ್ಯ ಶಿಕ್ಷಕ ಡಿ.ವಿ.ಕೃಷ್ಣಮೂರ್ತಿ ಅವರು ಉತ್ತಮ ಶಿಕ್ಷಕ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.

ಹಿರಿಯ ಪ್ರಾಥಮಿಕ ಶಾಲೆ ವಿಭಾಗ: ಚಿತ್ರದುರ್ಗ ತಾಲ್ಲೂಕು ಹುಲ್ಲೇಹಾಳ್ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಸಹ ಶಿಕ್ಷಕ ಜಿ.ಟಿ.ಹನುಮಂತಪ್ಪ, ಹಿರಿಯೂರು ತಾಲ್ಲೂಕು ಕಾಟನಾಯಕನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಸಹ ಶಿಕ್ಷಕ ಬಿ.ಆರ್.ಶ್ರೀನಿವಾಸ, ಚಳ್ಳಕೆರೆ ತಾಲ್ಲೂಕು ಸಿದ್ದಾಪುರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಸಹ ಶಿಕ್ಷಕಿ ಡಿ.ಪುಷ್ಪಲತ, ಮೊಳಕಾಲ್ಮುರು ತಾಲ್ಲೂಕು ಮೊಗಲಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಸಹ ಶಿಕ್ಷಕ ಎಂ.ಈಶ್ವರಪ್ಪ, ಚಳ್ಳಕೆರೆ ತಾಲ್ಲೂಕು ಹರವಿಗೊಂಡನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಸಹ ಶಿಕ್ಷಕ ಹೆಚ್.ಸುರೇಶ್, ಹೊಸದುರ್ಗ ತಾಲ್ಲೂಕು ಹೇರೂರು ಸರ್ಕಾರಿ ಸಹ ಶಿಕ್ಷಕಿ ಎ.ರೂಪ ಅವರು ಉತ್ತಮ ಶಿಕ್ಷಕ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.

ಕಿರಿಯ ಪ್ರಾಥಮಿಕ ಶಾಲೆ ವಿಭಾಗ: ಹೊಳಲ್ಕೆರೆ ತಾಲ್ಲೂಕು ಗುಂಡೇರಿ ಸರ್ಕಾರಿ ಉರ್ದು ಕಿರಿಯ ಸಹ ಶಿಕ್ಷಕಿ ಶಕೀಲಾ ಜಾನ್, ಹಿರಿಯೂರು ತಾಲ್ಲೂಕು ಕೆ.ಎನ್.ಗೊಲ್ಲರಹಟ್ಟಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಸಹ ಶಿಕ್ಷಕ ಹೆಚ್.ಪಿ.ಸುನೀಲ್ ಕುಮಾರ್, ಚಿತ್ರದುರ್ಗ ತಾಲ್ಲೂಕು ಹಲಗಪ್ಪನಹಟ್ಟಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಸಹ ಶಿಕ್ಷಕ ಎಸ್.ಸುರೇಶ್, ಹೊಳಲ್ಕೆರೆ ತಾಲ್ಲೂಕು ಬೋವಿಹಟ್ಟಿ ಅರೇಹಳ್ಳಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಸಹ ಶಿಕ್ಷಕ ಯು.ಮಹೇಶ್, ಮೊಳಕಾಲ್ಮುರು ತಾಲ್ಲೂಕು ಬಿಲಾಲ್ ನಗರ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಸಹ ಶಿಕ್ಷಕ ಎಮ್.ಇಬ್ರಾಹಿಂ, ಚಳ್ಳಕೆರೆ ತಾಲ್ಲೂಕು ಗೋಪನಹಳ್ಳಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಸಹ ಶಿಕ್ಷಕ ಎಂ.ಮಲ್ಲಿಕಾರ್ಜುನಪ್ಪ ಅವರು ಉತ್ತಮ ಶಿಕ್ಷಕ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.

ಜಿಲ್ಲಾಮಟ್ಟದ ವಿಶೇಷ ಪ್ರಶಸ್ತಿಗೆ ಆಯ್ಕೆಯಾದ ಶಿಕ್ಷಕರ ಪಟ್ಟಿ: ಚಿತ್ರದುರ್ಗ ತಾಲ್ಲೂಕು ಭರಮಸಾಗರ ಶ್ರೀ ಬಾಪೂಜಿ ಪ್ರೌಢಶಾಲೆ ಸಹ ಶಿಕ್ಷಕ ಟಿ.ಸಿ.ಗೊಂಚಿಗಾರ್, ಹೊಸದುರ್ಗ ತಾಲ್ಲೂಕು ಸರ್ಕಾರಿ ಪದವಿಪೂರ್ವ ಕಾಲೇಜು ಪ್ರೌಢಶಾಲಾ ವಿಭಾಗದ ದೈಹಿಕ ಶಿಕ್ಷಕ ಗ್ರೇಡ್-1 ವಿ.ಮಹಂತಪ್ಪ, ಚಿತ್ರದುರ್ಗ ತಾಲ್ಲೂಕು ಕುರುಬರಹಳ್ಳಿ ಸರ್ಕಾರಿ ಉರ್ದು ಹಿರಿಯ ಪ್ರಾಥಮಿಕ ಶಾಲೆ ಸಹ ಶಿಕ್ಷಕ ಉಮರ್ ಭಾಷ, ಯಳಗೋಡು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಸಹ ಶಿಕ್ಷಕ ಸಿ.ಎನ್.ಮಹೇಶ್, ಮೊಳಕಾಲ್ಮುರು ತಾಲ್ಲೂಕು ಕೆರೆಕೊಂಡಾಪುರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಸಹ ಶಿಕ್ಷಕಿ ಹೆಚ್.ಓಂಕಾರಮ್ಮ, ಚಳ್ಳಕೆರೆ ತಾಲ್ಲೂಕು ಬುಕ್ಕೋರಹಳ್ಳಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಸಹ ಶಿಕ್ಷಕ ಬಸವನಗೌಡ ಅವರು 2024-25ನೇ ಸಾಲಿನ ಜಿಲ್ಲಾಮಟ್ಟದ ವಿಶೇಷ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ.

## ಮಕ್ಕಳು ಗರ್ಭಿಣಿಯರಿಗೆ ಕಬ್ಬಿಣಾಂಶದ ಅವಶ್ಯಕತೆ ಹೆಚ್ಚು: ಶಿಶು ಅಭಿವೃದ್ಧಿ ಅಧಿಕಾರಿ ವೀಣಾ



» **ಚಿತ್ರದುರ್ಗ**

ಮಹಿಳೆಯರಿಗೆ, ಮಕ್ಕಳಿಗೆ, ಗರ್ಭಿಣಿಯರಿಗೆ ಹಾಗೂ ಹದಿಹರೆಯದವರಿಗೆ ಕಬ್ಬಿಣಾಂಶದ ಅವಶ್ಯಕತೆ ಹೆಚ್ಚಾಗಿರುತ್ತದೆ. ದೇಹದಲ್ಲಿ ಕಬ್ಬಿಣಾಂಶದ ಕೊರತೆಯಿಂದ ರಕ್ತಹೀನತೆ ಉಂಟಾಗುತ್ತದೆ ಎಂದು ಶಿಶು ಅಭಿವೃದ್ಧಿ ಅಧಿಕಾರಿ ವೀಣಾ ಹೇಳಿದರು.

ಪೋಷಣ ಮಾಸಾಚರಣೆ ಕಾರ್ಯಕ್ರಮ 2024 ಅಂಗವಾಗಿ ನಗರದ ಚಿತ್ರದುಗ ಪಿ & ಟಿ ಕ್ವಾಟರ್ಸ್ ಈಶ್ವರ ದೇವಸ್ಥಾನದ ಬಳಿ ಆಯೋಜಿಸಲಾದ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಆದ್ದರಿಂದ ಊಟದಲ್ಲಿ ಕಬ್ಬಿಣಾಂಶ ಹೆಚ್ಚಿರುವಂತೆ ನೋಡಿಕೊಳ್ಳಬೇಕು. ಆರೋಗ್ಯ ಇಲಾಖೆಯಿಂದ ನೀಡುವ ಪೋಲಿಕ್ ಆಮ್ಲ ಮಾತ್ರೆಗಳನ್ನು ತಪ್ಪದೇ ತೆಗೆದುಕೊಳ್ಳಬೇಕು. ಕಬ್ಬಿಣಾಂಶದ ಜೊತೆ ಆಹಾರದಲ್ಲಿ ಹೆಚ್ಚಿನ ರೀತಿಯಲ್ಲಿ ನಾರಿನ ಅಂಶ ಹೆಚ್ಚಿರುವ ತರಕಾರಿಗಳನ್ನು ಸೇವಿಸುವಂತೆ ತಿಳಿಸಿದರು.ಜಿಲ್ಲಾ ಕಾರ್ಯಕ್ರಮ ಸಂಯೋಜಕ ಕರಕಪ್ಪ ಮೇಟಿ ಮಾತನಾಡಿ ಪೋಷಣ ಅಭಿಯಾನ ಕಾರ್ಯಕ್ರಮವನ್ನು 2018 ಮಾರ್ಚ್ 8 ರಂದು ಗೌರವಾನ್ವಿತ ಪ್ರಧಾನಮಂತ್ರಿಗಳು ರಾಜಸ್ಥಾನದಲ್ಲಿ ಆರಂಭಿಸಿದರು. ಇದರಲ್ಲಿ 0-6 ವರ್ಷದ ಮಕ್ಕಳು, ಗರ್ಭಿಣಿಯರು, ಬಾಣಂತಿಯರು,ಮಹಿಳೆಯರು,ಹದಿಹರೆಯದವರು ಅಪೌಷ್ಟಕತೆ, ರಕ್ತಹೀನತೆ,ಕಡಿಮೆ ಹುಟ್ಟುತೂಕ, ಅನೀಮಿಯಾದಿಂದ ಬಳಲುತ್ತಿರುವರಿಗೆ ಪೌಷ್ಠಿಕ ಆಹಾರ ನೀಡಲಾಗುವುದು ಎಂದರು. ಇದೇ ವೇಳೆ 11 ಜೀವಸತ್ವಗಳು ಮತ್ತು ಅವುಗಳ ಕೊರತೆಯಿಂದ ಬರುವ ರೋಗಗಳು ಹಾಗೂ ನಿಯಂತ್ರಣಾ ಕ್ರಮಗಳ ಬಗ್ಗೆ ತಿಳಿಸಿದರು.ಅಂಗನವಾಡಿ ಮೇಲ್ವಿಚಾರಕ ಮಂಜುಳಾ ಹೆಚ್,ಎಸ್ ಕಾರ್ಯಕ್ರಮವನ್ನು ನಿರೂಪಿಸಿದರು, ಕಾರ್ಯಕ್ರಮದಲ್ಲಿ ಆರೋಗ್ಯ ಸಹಾಯಕ ವೀಣಾ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ತಾಲ್ಲೂಕು ಸಂಯೋಜಕರಾದ ಪ್ರದೀಪ, ಮೈಲಾರಲಿಂಗೇಶ್ವರ ಶಾಲೆಯ ಮುಖ್ಯೋಪಾಧ್ಯಾಯ ಸಿ,ಆರ್ ಶರಣಪ್ಪ, ಅಂಗನವಾಡಿ ಕಾರ್ಯಕರ್ತೆಯರು,ಆಶಾ ಕಾರ್ಯಕರ್ತೆಯರು ಹಾಗೂ ಗರ್ಭಿಣಿಯರು, ಬಾಣಂತಿಯರು, ಮಕ್ಕಳು ಭಾಗವಹಿಸಿದ್ದರು.

## ಅವಧಿ ವಿಸ್ತರಣೆ

**ದಾವಣಗೆರೆ:** ಅಲ್ಪಸಂಖ್ಯಾತರ ನಿರ್ದೇಶನಾಲಯ ವತಿಯಿಂದ ಕರ್ನಾಟಕ ಹಜ್ ಭವನ ಇಲ್ಲಿ ಪ್ರಸಕ್ತ ಸಾಲಿನ ಐಎಎಸ್, ಕೆಎಎಸ್ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಪರೀಕ್ಷಾ ಪೂರ್ವ ತರಬೇತಿ ನೀಡಲು ಅಭ್ಯರ್ಥಿಗಳಿಂದ ಈಗಾಗಲೇ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸುವ ಅವಧಿಯನ್ನು ಸೆಪ್ಟೆಂಬರ್ 10 ರವರೆಗೆ ವಿಸ್ತರಿಸಲಾಗಿದೆ ಎಂದು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ತಿಳಿಸಿದ್ದಾರೆ.

## ಅನಾಮಧೇಯ ಶವ ಪತ್ತೆ

**ದಾವಣಗೆರೆ:** ಹಡಗಲಿ ತಾಲ್ಲೂಕಿನ ಅಂಕಲಿ ಗ್ರಾಮದ ಬಳಿ ಇರುವ ತುಂಗಾಭದ್ರ ನದಿ ದಂಡೆಯಲ್ಲಿ ಸಮಾರು 40 ರಿಂದ 42 ವರ್ಷದ ಮೃತ ದೇಹವು ಸೆಪ್ಟೆಂಬರ್ 4 ರ ಬೆಳಿಗ್ಗೆ 8.15 ಗಂಟೆಗೆ ಪತ್ತೆಯಾಗಿರುತ್ತದೆ. ಮೃತನ ಬಗ್ಗೆ ಮಾಹಿತಿ ಇರುವುದಿಲ್ಲ. ಮಾಹಿತಿ ತಿಳಿದು ಬಂದಲ್ಲಿ ಹಡಗಲಿ 9480805780, 9480805737, ಹರಪನಹಳ್ಳಿ 9480805722, ವಿಜಯ ನಗರ 94808057029780805701 ಗೆ ಕರೆ ಮಾಡಿ ತಿಳಿಸಬಹುದಾಗಿದೆ.

## ಪ್ರಮುಖ ಸುದ್ದಿ

# ಹೆಚ್.ಸುರೇಶ್‌ಗೆ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ

» **ಮಹದೇವಪುರ ಶಿವಮೂರ್ತಿ**

ಪರಶುರಾಂಪುರ ಹೋಬಳಿಯ ಹರವಿಗೋಂಡನಹಳ್ಳಿ ಶಾಲೆಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಪ್ರಭಾರಿ ಮುಖ್ಯ ಶಿಕ್ಷಕ ಹೆಚ್ ಸುರೇಶ್ ಇವರಿಗೆ 2024-25 ಸಾಲಿನ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿಗೆ ಭಾಜನರಾಗಿದ್ದಾರೆ.

ಇವರಿಗೆ ಸೆ.5ರಂದು ಜಿಲ್ಲೆಯ ತರಾಸು ರಂಗಮಂದಿರದಲ್ಲಿ ನಡೆಯುವ ಶಿಕ್ಷಕರ ದಿನಾಚರಣೆಯ ಕಾರ್ಯಕ್ರಮದಲ್ಲಿ ಪ್ರಶಸ್ತಿಯನ್ನ ನೀಡಿ ಗೌರವಿಸಲಿದ್ದಾರೆ.

ಶಾಲೆಯ ಆರಂಭದಿಂದಲೂ ಕ್ರಿಯಾಶೀಲರಾಗಿ ಸೇವೆ ಸಲ್ಲಿಸಿದ್ದಾರೆ. ವಿದ್ಯಾರ್ಥಿಗಳಗಳೊಂದಿಗೆ ನಿತ್ಯವೂ ಆಟವಾಡುತ್ತಾ ಕಠಿಣವೆನಿಸಿದ ವಿಷಯಗಳನ್ನು ಶಿಕ್ಷಕ ವೃಂದವು ಸರಳವಾಗಿ ಹೇಳಿಕೊಡುವುದರ ಮೂಲಕ ಶಾಲಾಭಿವೃದ್ಧಿಗೆ ಕೈಜೋಡಿಸಿದ್ದಾರೆ.

ಕಲೆ ಮತ್ತು ಸಾಹಿತ್ಯ ನಿರಂತರ ಕೃಷಿ ಮಾಡುತ್ತಾ ತಮ್ಮನ್ನು ತೊಡಗಿಸಿಕೊಂಡಿದ್ದಾರೆ.ತಾನು ಮಾಡಿದ ಬಹುತೇಕ ಕಡೆ ಮಕ್ಕಳಿಗೆ ಪಾಠಗಳ ಜತೆ ಸ್ಥಳೀಯರು ಸಹಾಯದಿಂದ ಶಾಲೆಗಳು ಅಭಿವೃದ್ಧಿ ಪಡಿಸುವ ಪ್ರಯತ್ನದಲ್ಲಿ ಹಲವು ಬಾರಿ ಯಶಸ್ಸು ಕಂಡಿದ್ದಾರೆ.







ಶಾಲೆಯ ಅಭ್ಯುದಯಕ್ಕೆ ಎಲ್ಲರ ಸಹಕಾರದಿಂದ ಮಾದರಿಯಾಗಿದೆ.ಬದ್ದತೆಯಿಂದ ಎಲ್ಲವೂ ಬದಲಾವಣೆ ಸಾಧ್ಯ ಎಂಬುದಕ್ಕೆ ಸದರಿ ಶಾಲೆ ಉದಾರಹಣೆ ಎಂದರು.
» **ಕೆ ಎಸ್ ಸುರೇಶ ಬಿಇಓ**



ಅಧಿಕಾರಿಗಳ, ಎಸ್ಡಿಎಂಸಿ ,ಜನಪ್ರತಿನಿಧಿಗಳ, ಗ್ರಾಮಸ್ಥರ ಹಾಗೂ ಪೋಷಕರ ಸಹಕಾರದೊಂದಿಗೆ ಗುಣಾತ್ಮಕ ಶಿಕ್ಷಣ ಜತೆ ಕಲಿಕಾ ವಾತಾವರಣ ಸೃಷ್ಟಿಸಲು ಸಣ್ಣ ಪ್ರಯತ್ನ.
» **ಸುರೇಶ್. ಶಿಕ್ಷಕ ಹರವಿಗೋಂಡನಹಳ್ಳಿ**

ಇಲಾಖೆ ಹಾಗೂ ಸರ್ಕಾರದ ಆದೇಶಗಳನ್ನು ನಿಷ್ಠೆಯಿಂದ ಪಾಲನೆ ಮಾಡಿದ್ದಾರೆ.ಇವರ ಎಲ್ಲರ ಸಹಕಾರೊಂದಿಗೆ ಸೇವೆಗೆ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಲಭಿಸಿದೆ.

ಚಳ್ಳಕೆರೆ ತಾಲೂಕಿನ ರಂಗವ್ವನಹಳ್ಳಿ ಗ್ರಾಮದದಿಂದ ಶಿಕ್ಷಕ ವೃತ್ತಿ ಪ್ರಾರಂಭಿಸಿ ಸಿಆರ್‌ಪಿ ಜತೆ ಹಲವು ಶಾಲೆಗಳಲ್ಲಿ ಸೇವೆ ಸಲ್ಲಿಸಿದ ಇವರು ಪಗಡಲಬಂಡೆ ಶಾಲೆಯಿಂದ ಹರವಿಗೋಂಡನಹಳ್ಳಿ ಶಾಲೆಗೆ ವರ್ಗಾವಣೆಗೊಂಡು ಗ್ರಾಮಸ್ಥರ, ಜನಪ್ರತಿನಿಧಿಗಳ ಹಾಗೂ ಹಳೆ ವಿದ್ಯಾರ್ಥಿಗಳ ಸಹಕಾರದೊಂದಿಗೆ ಶೈಕ್ಷಣಿಕ ಅಭಿವೃದ್ಧಿಗೆ ಪ್ರಯತ್ನಿಸುತ್ತಾರೆ .

ಸಹಕಾರದೊಂದಿಗೆಶಾಲಾಕಾಂಪೌಂಡ್, ಸ್ಮಾರ್ಟ್ ಕ್ಲಾಸ್,ಮೈಕ್ ಸೆಟ್, ಜೆರಾಕ್ಸ್ ಮೆಷಿನ್,ವೀಲ್ ಚೇರ್,ಸುಣ್ಣ ಬಣ್ಣ, ಹೈಟೆಕ್ ಶೌಚಾಲಯ,ಕೈತೋಟ, ಫಿಲ್ಟರ್ ವಾಟರ್ ,ಧ್ವಜದ ಕಟ್ಟೆ,ಗೋಡೆಗಳ ಮೇಲೆ ಸಾಧಕರ ಪರಿಚಯ ಜತೆ ಸರ್ವೋತೋಮುಖ ಅಭಿವೃದ್ಧಿ ಜತೆ ಇಲ್ಲಿ 100 ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮಾಡುತ್ತಿದ್ದಾರೆ.

## ಫಾಸ್ಟ್ ನ್ಯೂಸ್

### ಮಹಾತ್ಮ ಗಾಂಧೀ ಸೇವಾ ಪ್ರಶಸ್ತಿ ಕರ್ನಾಟಕ ಆಯ್ಕೆಗೆ ನಾಮನಿರ್ದೇಶನ ಆಹ್ವಾನ

» **ಚಿತ್ರದುರ್ಗ**

ರಾಜ್ಯ ಸರ್ಕಾರವು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ಸ್ಥಾಪಿಸಿರುವ ಐದು ಲಕ್ಷ ರೂಪಾಯಿ ನಗದನ್ನು ಒಳಗೊಂಡ "ಮಹಾತ್ಮಗಾಂಧೀ ಸೇವಾ ಪ್ರಶಸ್ತಿ-ಕರ್ನಾಟಕ"ಗೆ 2024 ನೇ ಸಾಲಿಗೆ ಅರ್ಹ ಸಾಧಕರನ್ನು ಅಥವಾ ಸಂಘ ಸಂಸ್ಥೆಗಳನ್ನು ಆಯ್ಕೆ ಮಾಡಲು ನಾಮನಿರ್ದೇಶನಗಳನ್ನು ಆಹ್ವಾನಿಸಲಾಗಿದೆ.ಸಾರ್ವಜನಿಕ ಜೀವನದಲ್ಲಿ ಮಹಾತ್ಮಗಾಂಧೀಜಿಯವರ ಆದರ್ಶಗಳನ್ನು ಅಳವಡಿಸಿಕೊಂಡು ಜೀವನ ನಡೆಸುತ್ತಿರುವ ಕನಿಷ್ಠ 60 ವರ್ಷಗಳಾಗಿರುವ ವ್ಯಕ್ತಿಗಳು ಅಥವಾ 25 ವರ್ಷಗಳು ತುಂಬಿರುವ ಸೇವಾ ಸಂಸ್ಥೆಗಳನ್ನು ಈ ಪ್ರಶಸ್ತಿಗೆ ಪರಿಗಣಿಸಲಾಗುವುದು. ಪ್ರಶಸ್ತಿಯನ್ನು ಆಯ್ಕೆ ಮಾಡಲು ಆಯ್ಕೆ ಸಮಿತಿಯನ್ನು ರಚಿಸಲಾಗುವುದು. 2024 ರ ಅಕ್ಟೋಬರ್ 02 ರಂದು ಪ್ರಶಸ್ತಿ ಪ್ರದಾನ ಮಾಡಲಾಗುವುದು. ಮಹಾತ್ಮಗಾಂಧೀಜಿಯವರು ಪ್ರಚುರಪಡಿಸಿದ ಜನಪರ ಕಾರ್ಯಕ್ರಮಗಳಾದ ಅಸ್ಪೃಶ್ಯತೆ ನಿವಾರಣೆ, ಅಹಿಂಸೆ, ಮಹಿಳಾ ಸಬಲೀಕರಣ, ಗ್ರಾಮೀಣ ನೈರ್ಮಲ್ಯ, ಮದ್ಯಪಾನ ವಿರೋಧಿ ನೀತಿ, ಖಾದಿ ಮತ್ತು ಸ್ವದೇಶಿವಸ್ತು ಬಳಕೆ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಉದ್ಧಾರ, ಈ ಕ್ಷೇತ್ರಗಳಲ್ಲಿ ಸ್ವಯಂ ಪ್ರೇರಣೆಯಿಂದ ತೊಡಗಿರುವ ವ್ಯಕ್ತಿಗಳು ಅಥವಾ ಸಂಸ್ಥೆಗಳು ಈ ಪ್ರಶಸ್ತಿಗೆ ಅರ್ಜಿ ಸಲ್ಲಿಸಬಹುದು ಅಥವಾ ಸಂಘ ಸಂಸ್ಥೆಗಳು ಅಥವಾ ವ್ಯಕ್ತಿಗಳು ನಾಮನಿರ್ದೇಶನ ಕೂಡ ಮಾಡಬಹುದಾಗಿದೆ. ಸೆಪ್ಟೆಂಬರ್ 19 ರ ಸಂಜೆ 5.30 ರೊಳಗಾಗಿ ಅರ್ಜಿಗಳನ್ನು ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಾರ್ತಾ ಸೌಧ, ನಂ. 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು-560 001 ಅಥವಾ ಇ-ಮೇಲ್ : informationdiprawards@gmail.com ವಿಳಾಸಕ್ಕೆ ಕಳುಹಿಸಬಹುದಾಗಿದೆ.

### ನಾಗಪುರ ದೀಕ್ಷಾಭೂಮಿ ಯಾತ್ರೆ: ಸೆ.5 ಅರ್ಜಿ ಸಲ್ಲಿಸಲು ಕಡೆಯ ದಿನ

» **ಚಿತ್ರದುರ್ಗ**

ನಾಗಪುರ ದೀಕ್ಷಾಭೂಮಿಯಲ್ಲಿ ನಡೆಯುವ ದಮ್ಮ ಪ್ರವರ್ತನ ದಿನ ಕಾರ್ಯಕ್ರಮಕ್ಕೆ ತೆರಳುವ ಯಾತ್ರಿಗಳಿಗೆ ಸಾರಿಗೆ ವ್ಯವಸ್ಥೆ ಕಲ್ಪಿಸುವ ಅರ್ಜಿ ಸಲ್ಲಿಕೆಗೆ ಸೆ.5 ಕಡೆಯ ದಿನವಾಗಿದೆ. ಆಸಕ್ತರು ಸೆ.5ರ ಸಂಜೆ 5.30 ಒಳಗಾಗಿ ಆನ್-ಲೈನನಲ್ಲಿ https://swdservice.karnataka.gov.in ಮೂಲಕ ಅರ್ಜಿ ಸಲ್ಲಿಸಬಹುದು.

### ಸಾಮಾಜಿಕ ಭದ್ರತಾ ಯೋಜನೆ ಫಲಾನುಭವಿ ಎನ್‌ಪಿಸಿಐ ಮ್ಯಾಪಿಂಗ್ ಮಾಡಿಸಲು ಸೂಚನೆ

» **ಚಿತ್ರದುರ್ಗ**

ವಿವಿಧ ಸಾಮಾಜಿಕ ಭದ್ರತೆ ಯೋಜನೆಗಳಡಿ ಮಾಸಾಶನ ಪಡೆಯುತ್ತಿರುವ ಫಲಾನುಭವಿಗಳ ಅಂಚೆ, ಬ್ಯಾಂಕ್ ಖಾತೆಗೆ ಆಧಾರ್ ಮತ್ತು ಎನ್‌ಪಿಸಿಐ ಮ್ಯಾಪಿಂಗ್ ಮಾಡುವಂತೆ ಸೂಚಿಸಿದೆ. ವಿವಿಧ ಸಾಮಾಜಿಕ ಭದ್ರತೆ ಯೋಜನೆಗಳಡಿ ಹಾಲಿ ಮಾಸಾಶನ ಪಡೆಯುತ್ತಿರುವ ಫಲಾನುಭವಿಗಳಿಗೆ ಮಾಸಾಶನ ಮೊತ್ತವನ್ನು ಪ್ರತಿ ಮಾಹೆ ವಿಳಂಬವಾಗದಂತೆ ಸಕಾಲದಲ್ಲಿ ಫಲಾನುಭವಿಗಳಿಗೆ ಅನುಕೂಲಕರವಾದ ಅಂಚೆ, ಬ್ಯಾಂಕ್ ಖಾತೆಗೆ 2023ರ ಡಿಸೆಂಬರ್ ಮಾಹೆಯಿಂದ ನೇರ ಹಣ ಸಂದಾಯ ಮೂಲಕ ಜಮಾ ಮಾಡಲಾಗುತ್ತಿದೆ.

ಪ್ರಯುಕ್ತ ಈ ಯೋಜನೆಗಳಡಿ ಫಲಾನುಭವಿಗಳಿಗೆ ಮಾಸಾಶನ ಮೊತ್ತವನ್ನು ಡಿಸೆಂಬರ್ 2023ರ ಮಾಹೆಯಿಂದ ಆಧಾರ್ ಮತ್ತು ಎನ್‌ಪಿಸಿಐ ಮ್ಯಾಪಿಂಗ್ ಆದಂತಹ ಬ್ಯಾಂಕ್, ಅಂಚೆ ಖಾತೆಗಳಿಗೆ ನೇರವಾಗಿ ಜಮಾ ಮಾಡಲಾಗುತ್ತಿದ್ದು, ಕಳೆದ 2-3 ತಿಂಗಳಿಂದ ಮಾಸಾಶನ ಪಡೆಯದಂತಹ ಫಲಾನುಭವಿಗಳು ನೇರವಾಗಿ ಇತ್ತೀಚಿನ ಆಧಾರ್ ಕಾರ್ಡ್ ಮತ್ತು ಎನ್‌ಪಿಸಿಐ ಮ್ಯಾಪಿಂಗ್ ಆದಂತಹ ಅಂಚೆ, ಬ್ಯಾಂಕ್ ಪುಸ್ತಕದೊಂದಿಗೆ ಸಂಬಂಧಿಸಿದ ನಾಡಕಛೇರಿಯ ಉಪತಹಶೀಲ್ದಾರ್ ಅಥವಾ ತಹಶೀಲ್ದಾರ್‌ಗಳನ್ನು ತಪ್ಪದೆ ಸಂಪರ್ಕಿಸಿ.

### ರೈಲಿಗೆ ವ್ಯಕ್ತಿ ಸಿಲುಕಿ ಮೃತ್ಯು: ಪತ್ತೆಗೆ ಮನವಿ

» **ಚಿತ್ರದುರ್ಗ**

ಚಿತ್ರದುರ್ಗ ಹಾಗೂ ಬಾಲೇನಹಳ್ಳಿ ರೈಲು ನಿಲ್ದಾಣಗಳ ಮಧ್ಯೆ ಚಿತ್ರದುರ್ಗ ನಗರದ ಎಪಿಎಂಸಿ ಬಳಿ ರೈಲು ಗಾಡಿಗೆ ಸಿಲುಕಿ ಸು. 30-35ವರ್ಷದ ಅಪರಿಚಿತ ವ್ಯಕ್ತಿ ಮೃತಪಟ್ಟಿರುವ ಕುರಿತು ಬುಧವಾರ ರೈಲ್ವೇ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮೃತ ವ್ಯಕ್ತಿಯು ಸು.5.5 ಅಡಿ ಎತ್ತರ, ಕೋಲು ಮುಖ, ಸಾಧಾರಣ ಶರೀರ, ಗೋಧಿ ಮೈ ಬಣ್ಣ, ತಲೆಯಲ್ಲಿ ಸು.2 ಇಂಚು ಉದ್ದದ ಕಪ್ಪು ಕೂದಲು, ಕುರುಚಲು ಗಡ್ಡ ಮೀಸೆ ಹೊಂದಿದ್ದು, ಎಡಗೈಯಲ್ಲಿ HARSHA G ಎಂಬ ಅಚ್ಚೆ ಗುರುತು ಇದೆ. ನೀಲಿ ಬಣ್ಣದ ಜರ್ಕಿನ್, ಬಿಳಿ ಬಣ್ಣದ ಸೀಮೆಂಟ್ ಪಟ್ಟಿಯ ರೆಡಿಮೇಡ್ ಅಂಗಿ, ನೀಲಿ ಬಣ್ಣದ ಪ್ಯಾಂಟ್, ಕಾಫಿ ಬಣ್ಣದ ಟೀ ಶರ್ಟ್ ಧರಿಸಿರುತ್ತಾರೆ.ದೂರವಾಣಿ ಸಂಖ್ಯೆ 9480802123, ಇ-ಮೇಲ್: davangererly@ksp.gov.in ಗೆ ಸಂಪರ್ಕಿಸಲು ಪ್ರಕಟಣೆಯಲ್ಲಿ ತಿಳಿಸಿದೆ.

### ಅದ್ದೂರಿ ಮೆರವಣಿಗೆ, ಪ್ರತಿಭಾನ್ವಿತ ವಿದ್ಯಾರ್ಥಿಗಳು ಹಾಗೂ ಸಾಧಕರಿಗೆ ಸನ್ಮಾನ

# ಸೆ.17 ರಂದು ವಿಶ್ವಕರ್ಮ ಜಯಂತಿ ಆಚರಣೆ

» **ಚಿತ್ರದುರ್ಗ**

ಜಿಲ್ಲಾಡಳಿತ, ಜಿಲ್ಲಾಪಂಚಾಯತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ನಗರಸಭೆ ಹಾಗೂ ವಿಶ್ವಕರ್ಮ ಸಮಾಜದ ಸಹಯೋಗದಲ್ಲಿ ಇದೇ ಸೆ.17 ರಂದು ವಿಜೃಂಭಣೆಯಿಂದ ವಿಶ್ವಕರ್ಮ ಜಯಂತಿ ಆಚರಿಸಲಾಗುವುದು ಎಂದು ಉಪವಿಭಾಗಧಿಕಾರಿ ಎಂ.ಕಾರ್ತಿಕ್ ಹೇಳಿದರು.

ಈ ಕುರಿತು ಬುಧವಾರ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತಮಾಡಿದರು.

ವಿಶ್ವಕರ್ಮ ಜಯಂತಿಯನ್ನು ಹಬ್ಬದ ರೀತಿ ಆಚರಿಸಲಾಗುವುದು. ಸರ್ಕಾರದ ಶಿಷ್ಠಾಚರಾದ ಅನುಸಾರ ಆಹ್ವಾನ ಪತ್ರಿಕೆ ಮುದ್ರಿಸಿ ಜನಪ್ರತಿನಿಧಿಗಳನ್ನು ಜಯಂತಿ ಕರೆಯಲಾಗುವುದು. ಉಪನ್ಯಾಸ ಹಾಗೂ ಸಂಗೀತ ಕಾರ್ಯಕ್ರಮ ಆಯೋಜಿಸಲಾಗುವುದು ಎಂದು ಉಪವಿಭಾಗಧಿಕಾರಿ ಎಂ.ಕಾರ್ತಿಕ್ ಹೇಳಿದರು.ಸರ್ಕಾರ ನೀಡುವ



ಅನುದಾನದಲ್ಲಿ ಆಹ್ವಾನ ಪತ್ರಿಕೆ, ವೇದಿಕೆ ಅಲಂಕಾರ, ಉಪನ್ಯಾಸ ಕಾರ್ಯಕ್ರಮ, ವಿಶ್ವಕರ್ಮ ಸಮುದಾಯ ಓರ್ವ ಹಿರಿಯ ಕಲಾವಿದರಿಗೆ ಸಂಗೀತ ಕಾರ್ಯಕ್ರಮದ ವೆಚ್ಚ ಒದಗಿಸಲಾಗುವುದು. ಮೆರವಣಿಗೆ 2 ಜನಪದಕಲಾತಂಡಗಳನ್ನುಇಲಾಖೆಯಿಂದ ನಿಯೋಜನೆಗೊಳಿಸಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರವಿಚಂದ್ರ ತಿಳಿಸಿದರು.

ಭಗವಾನ್ ವಿಶ್ವಕರ್ಮರ ಕುರಿತು ಉಪನ್ಯಾಸ ನೀಡಲು ಶಿಕ್ಷಕ ರಾಘವೇಂದ್ರ ಆಚಾರ್ ಅವರನ್ನು ಆಹ್ವಾನಿಸುವಂತೆ ಉಪವಿಭಾಗಧಿಕಾರಿಗಳಲ್ಲಿ ಸಮುದಾಯ ಮುಖಂಡರು ಮನವಿ ಮಾಡಿಕೊಂಡರು. ಸಮುದಾಯದಲ್ಲಿನ ಪ್ರತಿಭಾನ್ವಿತ ವಿದ್ಯಾರ್ಥಿಗಳು ಹಾಗೂ ಸಾಧನೆ ತೋರಿದ ಸಾಧಕರಿಗೆ ಜಿಲ್ಲಾ ವಿಶ್ವಕರ್ಮ ಸಮಾಜದ ವತಿಯಿಂದ ಸನ್ಮಾನಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ಅದ್ದೂರಿ ಭಾವಚಿತ್ರ ಮೆರವಣಿಗೆ : ಜಯಂತಿ ಅಂಗವಾಗಿ ಸೆ.17 ರಂದು ನಗರದ ಬುರಜಹಟ್ಟಿ ಆಂಜನೇಯ ದೇವಸ್ಥಾನದಿಂದ ತರಾಸು ರಂಗ ಮಂದಿರದವರೆಗೆ ವಿಶ್ವಕರ್ಮ ಭಾವಚಿತ್ರ ಮೆರವಣಿಗೆ ಮಾಡಲಾಗುವುದು. ಬೆಳಿಗ್ಗೆ 10:30 ಮೆರವಣಿಗೆ ಚಾಲನೆ ನೀಡಲಾಗುವುದು. ನಾದಸ್ವರ ಡೊಳ್ಳು ಸೇರಿದಂತೆ ವಿವಿಧ ಜನಾಪದ ಕಲಾತಂಡಗಳು ಭಾಗವಹಿಸುವವು. ಮಧ್ಯಾಹ್ನ 11:30 ಗಂಟೆಗೆ ತರಾಸು ರಂಗಮಂದಿರಲ್ಲಿ ವೇದಿಕೆ ಕಾರ್ಯಕ್ರಮ ಜರುಗಲಿದೆ.

ಸಭೆಯಲ್ಲಿ ಶಾಲಾ ಶಿಕ್ಷಣ ಹಾಗೂ ಸಾಕ್ಷರತ ಇಲಾಖೆ ಉಪನಿರ್ದೇಶಕ ಮಂಜುನಾಥ, ವಿಶ್ವಕರ್ಮ ಸಮಾಜದ ಮುಖಂಡರಾದ ಸುರೇಶ್ ಆಚಾರಿ, ಕೆ.ಮಲ್ಲಿಕಾರ್ಜುನ್, ಸುರೇಶ್, ಕೃಷ್ಣಾಚಾರ್, ಗೋವಿಂದ್, ಹೆಚ್.ಪಿ.ರಾಜೇಂದ್ರ, ಕೆ.ಶಿವನ್ನಾಚಾರಿ ಸೇರಿದಂತೆ ಮತ್ತಿತರರು ಇದ್ದರು.

# ಹೋಬಳಿ ಮಟ್ಟ ಕ್ರೀಡಾಕೂಟ ತಾಲ್ಲೂಕು ಮಟ್ಟಕ್ಕೆ

» **ಚಿತ್ರದುರ್ಗ**

ನಗರದ ಪ್ರತಿಷ್ಠಿತ ಶಾಲೆಯಾದ ವಿದ್ಯಾ ವಿಕಾಸ ವಿದ್ಯಾಸಂಸ್ಥೆ,ಯ ವಿದ್ಯಾರ್ಥಿಗಳು ಹೋಬಳಿ ಮಟ್ಟದ ಕ್ರೀಡಾ ಕೂಟದಿಂದ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾಗಿ ತಾಲ್ಲೂಕು ಮಟ್ಟಕ್ಕೆ ಆಯ್ಕೆಯಾಗಿರುತ್ತಾರೆ.

ಹೋಬಳಿ ಮಟ್ಟದಿಂದ ತಾಲ್ಲೂಕು ಮಟ್ಟಕ್ಕೆಆಯ್ಕೆ ಅಥ್ಲೆಟಿಕ್ಸ್ ನೌಮನ್ ಅಹಮ್ಮದ್ ಷರೀಫ್ 10ನೇ ತರಗತಿ 100ಮೀ, 400ಮೀ, 400ಮೀ ಹರ್ಡಲ್ಸ್, 4ಫಿ100ಮೀ ರಿಲೇ, 4ಫಿ400ಮೀ ರಿಲೇ ಓಟದಲ್ಲಿ -ಪ್ರಥಮ ಸ್ಥಾನ ಪಡೆದಿದ್ದಾರೆ.ವೈಯಕ್ತಿಕ ಚಾಂಪಿಯನ್ ಷಿಫ್ ಪಡೆದು 6 ಚಿನ್ನದ ಪದಕಗಳನ್ನು ಪಡೆದಿದ್ದಾರೆ.

ಮೋಹಿತ್ ಸಿ ಹೆಚ್ 10ನೇ ತರಗತಿ-200ಮೀ, 100ಮೀ-ದ್ವಿತೀಯ ,ಟ್ರಿಪಲ್ ಜಂಪ್-ದ್ವಿತೀಯ, ರಿಲೇ 4ಫಫಿ100ಮೀ- ಪ್ರಥಮ, ರಿಲೇ 4400ಮೀ- ಪ್ರಥಮ ಸ್ಥಾನ ಪಡೆದಿದ್ದಾರೆ. ಮೊಹಮ್ಮದ್ ಸೈಫುಲ್ಲಾ 10ನೇ ತರಗತಿ ಟ್ರಿಪಲ್ ಜಂಪ್-ಪ್ರಥಮ, ರಿಲೇ 4ಫಿ100ಮೀ ಪ್ರಥಮ, ರಿಲೇ 4ಫಿ400ಮೀ-ಪ್ರಥಮ ಸ್ಥಾನ ಪಡೆದಿದ್ದಾರೆ. ವರ್ದೇಶ್.ಸಿ.ಹೆಚ್ 10ನೇ ತಗರತಿ ಜಾವಲಿನ್ ಥ್ರೋ,-ದ್ವಿತೀಯ, 800ಮೀ -ತೃತೀಯ, ರಿಲೇ 4ಫಿ100ಮೀ -ಪ್ರಥಮ, ರಿಲೇ 4ಫಿ400ಮೀ -ಪ್ರಥಮ ಸ್ಥಾನ ಪಡೆದಿದ್ದಾರೆ. ಈ ಮೇಲ್ಕಂಡ 4 ವಿದ್ಯಾರ್ಥಿಗಳು ಹೋಬಳಿ ಮಟ್ಟದಿಂದ ಮತ್ತು ತಾಲ್ಲೂಕು ಮಟ್ಟಕ್ಕೆ ಆಯ್ಕೆಯಾಗಿರುತ್ತಾನೆ.



ಬಾಲಕರ ಗುಂಪು ಆಟಗಳ ವಿಭಾಗದಲ್ಲಿ ವರ್ದೇಶ್.ಸಿ.ಹೆಚ್ ಮತ್ತು ತಂಡದವರು ಹಾಕಿಯಲ್ಲಿ ಪ್ರಥಮ ಸ್ಥಾನ ಪಡೆದು ತಾಲ್ಲೂಕು ಮಟ್ಟಕ್ಕೆ ಆಯ್ಕೆಯಾಗಿರುತ್ತಾನೆ. ಪುನೀತ್ ಸಿ ಮತ್ತು ತಂಡದವರುಟೇಬಲ್‌ಟೆನ್ನೀಸ್‌ನಲ್ಲಿ-ಪ್ರಥಮಸ್ಥಾನ ಗಳಿಸಿ ತಾಲ್ಲೂಕು ಮಟ್ಟಕ್ಕೆಆಯ್ಕೆಯಾಗಿರುತ್ತಾರೆ. ಅಬ್ದುಲ್ ರೆಹಮಾನ್ ಮತ್ತು ತಂಡದವರು ಬಾಲ್ ಬ್ಯಾಡ್ಮಿಂಟನ್‌ನಲ್ಲಿ -ದ್ವಿತೀಯ ಸ್ಥಾನ ಪಡೆದಿರುತ್ತಾರೆ. ಧನುಷ್ ಎಂ ಎಸ್ ಮತ್ತು ತಂಡದವರು ಷಟಲ್ ಬ್ಯಾಟಮಿಂಟನ್-ದ್ವಿತೀಯ ಸ್ಥಾನ ಪಡೆದಿರುತ್ತಾರೆ.

ಬಾಲಕಿಯರ ಗುಂಪು ಆಟಗಳ ವಿಭಾಗದಲ್ಲಿ ಸಿಂಧೂರ ಮತ್ತು ತಂಡದವರು ಟೇಬಲ್ ಟೆನ್ನೀಸ್‌ನಲ್ಲಿ -ಪ್ರಥಮ ಸ್ಥಾನ ಗಳಿಸಿ ತಾಲ್ಲೂಕು ಮಟ್ಟಕ್ಕೆಆಯ್ಕೆಯಾಗಿರುತ್ತಾರೆ. ಗಗನ ಪಡ್ವಿ.ಡಿ ಮತ್ತು ತಂಡದವರು ಷಟಲ್ ಬ್ಯಾಡ್ಮಿಂಟನ್‌ನಲ್ಲಿ-ಪ್ರಥಮ ಸ್ಥಾನ ಗಳಿಸಿ ತಾಲ್ಲೂಕು ಎ ಟ್ಟಕ್ಕೆಆಯ್ಕೆಯಾಗಿರುತ್ತಾರೆ.ಸಂಪ್ರತಾ ಮತ್ತು ತಂಡದವರು ಥ್ರೋಬಾಲ್‌ನಲ್ಲಿ-ದ್ವಿತೀಯ ಸ್ಥಾನ ಗಳಿಸಿರುತ್ತಾರೆ.

ಹೋಬಳಿ ಮಟ್ಟದಿಂದ ತಾಲ್ಲೂಕು ಮಟ್ಟಕ್ಕೆ ಆಯ್ಕೆಯಾಗಿ ಶಾಲೆಗೆ ಕೀರ್ತಿ ತಂದ ಕ್ರೀಡಾಪಟುಗಳಿಗೆ ಸಂಸ್ಥೆಯ ಕಾರ್ಯದರ್ಶಿ ಬಿ.ವಿಜಯ್ ಕುಮಾರ್ ,ಸಂಸ್ಥೆಯ ಮುಖ್ಯ ಶಿಕ್ಷಕ ತಿಪ್ಪೇಸ್ವಾಮಿ.ಎನ್.ಜಿ, ಐಸಿಎಸ್‌ಇ ಪ್ರಿನ್ಸಿಪಾಲ ಬಸವರಾಜಯ್ಯ.ಪಿ ಐಸಿಎಸ್‌ಇ ಉಪಪ್ರಿನ್ಸಿಪಾಲ ಅವಿನಾಶ್ ಬಿ, ಸಂಸ್ಥೆಯ ನಿರ್ದೇಶಕರಾದ ಎಸ್. ಎಂ ಪೃಥ್ವೀಶ್, ಹಾಗೂ ಶ್ರೀಮತಿ ಸುನಿತಾ.ಪಿ.ಸಿ ಮತ್ತು ಎಲ್ಲಾ ಶಿಕ್ಷಕ/ಶಿಕ್ಷಕೇತರ ವೃಂದದವರು ಶ್ಲಾಘಿಸಿ ಅಭಿನಂದಿಸಿದ್ದಾರೆ.

## ಗೌರಸಮುದ್ರ ಮಾರಮ್ಮ ಹುಂಡಿಯಲ್ಲಿ 10.53.600 ಹಣ ಸಂಗ್ರಹ



» **ಚಳ್ಳಕೆರೆ**

ತಾಲ್ಲೂಕಿನ ತಳಕು ಹೋಬಳಿಯ ಗೌರಸಮುದ್ರ ಮಾರಮ್ಮದೇವಿ ಜಾತ್ರೆ ಬುಧವಾರ ನಡೆದ ಸಿಡಿ ಉತ್ಸವದೊಂದಿಗೆ ಜಾತ್ರೆಯ ಕಾರ್ಯಕಲಾಪಗಳು ಮುಕ್ತಾಯಗೊಂಡಿದ್ದು, ಜಾತ್ರೆಯಲ್ಲಿ ಭಾಗವಹಿಸಿದ ಎಲ್ಲಾ ಭಕ್ತರಿಗೂ ಹಾಗೂ ಸೂಕ್ತ ವ್ಯವಸ್ಥೆ ಕಲ್ಪಿಸಿದ ಜಿಲ್ಲಾ ಹಾಗೂ ತಾಲ್ಲೂಕು ಆಡಳಿತಕ್ಕೆ ದೇವಸ್ಥಾನದ ಆಡಳಿತಮಂಡಳಿ ಹಾಗೂ ಗ್ರಾಮ ಪಂಚಾಯಿತಿ ಆಡಳಿತ ಅಭಿನಂದನೆ ತಿಳಿಸಿದೆ. ಜಾತ್ರಾ ಸಂದರ್ಭದಲ್ಲಿ ದೇವಸ್ಥಾನದ ಆವರಣದಲ್ಲಿದ್ದ ಹುಂಡಿ ಹಣವನ್ನು ದೇವಸ್ಥಾನದ ಆಡಳಿತ ಮಂಡಳಿ ಮಂಗಳವಾರ ತಡರಾತ್ರಿರವರೆಗೂ ಏಣಿಕೆ ಮಾಡಲಾಗಿ 10.53.600 ನಗದು ಹಣ ಹುಂಡಿಯಲ್ಲಿ ಸಂಗ್ರಹವಾಗಿದೆ. ಮಂಗಳವಾರ ಸಂಜೆ ಮುಜುರಾಯಿ ಅಧಿಕಾರಿ, ತಹಶೀಲ್ದಾರ್ ರೇಹಾನ್‌ಪಾಷ ದೇವಸ್ಥಾನದ ಆಡಳಿತ ಮಂಡಳಿ, ಗ್ರಾಮ ಪಂಚಾಯಿತಿ ಅಧ್ಯಕ್ಷ ಓಬಣ್ಣ ಹಾಗೂ ಕಂದಾಯ ಇಲಾಖೆ ಸಿಬ್ಬಂದಿಯೊಂದಿಗೆ ಹುಂಡಿಹಣವನ್ನು ತುರ್ತಾಗಿ ಏಣಿಕೆ ಮಾಡಿ ಬ್ಯಾಂಕ್‌ಗೆ ಜಮಾ ಮಾಡಲಾಯಿತು.

# ವಲಯ ಮಟ್ಟದಲ್ಲಿ ಪೋಷಣ್ ಮಾಸಾಚರಣೆ ಕಾರ್ಯಗಾರ

» **ದಾವಣಗೆರೆ**

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಪೋಷಣ್ ಅಭಿಯಾನ ಯೋಜನೆಯಡಿ ಸೆಪ್ಟೆಂಬರ್ 3 ರಂದು ಕಡ್ಲೆಬಾಳು ಗ್ರಾಮದ ಆಯುಷ್ ಇಲಾಖೆಯಲ್ಲಿ ಪೋಷಣ್ ಮಾಸಾಚರಣೆ ಅಂಗವಾಗಿ ಕಾರ್ಯಗಾರ ಏರ್ಪಡಿಸಲಾಯಿತು. ಕಾರ್ಯಗಾರದ ಉದ್ಘಾಟನೆಯನ್ನು ಕಡ್ಲೆಬಾಳು ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಮಂಜುಳಾ ಬಾಯಿ ನೆರವೇರಿಸಿದರು. ಕಾರ್ಯಗಾರದಲ್ಲಿ ಶಿಶು ಅಭಿವೃದ್ಧಿ ಸಹಾಯಕ ಯೋಜನಾಧಿಕಾರಿ ಪ್ರಿಯದರ್ಶಿನಿ, ಆಯುಷ್ ವೈದ್ಯಾಧಿಕಾರಿಗಳು ಕಿಶೋರಿ ,ಜಿಲ್ಲಾ ಮಿಷನ್ ಶಕ್ತಿ ಸಂಯೋಜಕರು ಜಗದೀಶ್, ಗ್ರಾಮ ಪಂಚಾಯಿತಿ ಉಪಾಧ್ಯಕ್ಷರಾದ ಪ್ರಭು ಎ.ಬಿ., ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು, ಆಶಾ ಕಾರ್ಯಕರ್ತೆಯರು, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು ಹಾಗೂ ಮುಂತಾದವರು ಭಾಗವಹಿಸಿದ್ದರು.



## ಸೆ.12 ರಂದು ಉದ್ಯೋಗ ಮೇಳ

» **ದಾವಣಗೆರೆ**

ಶಿಶುಕ್ಷ ತರಬೇತಿ ಸಂಸ್ಥೆ, ಚೆನ್ನೈ (ದಕ್ಷಿಣ ವಲಯ) ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ನಗರದ ವಿವೇಕಾನಂದ ಬಡಾವಣೆಯಲ್ಲಿರುವ ಬಾಪೂಜಿ ಪಾಲಿಟೆಕ್ನಿಕ್‌ನಲ್ಲಿ ಸೆ.12 ರ ಬೆಳಗ್ಗೆ 9.30ಕ್ಕೆ ನೇರ ಸಂದರ್ಶನದಲ್ಲಿ ಅಪ್ರೆಂಟಿಶಿಪ್ ಮೇಳ ಹಾಗೂ ಉದ್ಯೋಗ ಮೇಳ ಏರ್ಪಡಿಸಲಾಗಿದೆ. ಸರ್ಕಾರಿ ಕಂಪನಿಗಳು ಮತ್ತು ಬಹು ರಾಷ್ಟ್ರೀಯ ಕಂಪನಿಗಳು ಈ ಮೇಳದಲ್ಲಿ ಭಾಗವಹಿಸಿ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗುತ್ತದೆ. ಆದ್ದರಿಂದ 2020 2021,2022,2023 ಮತ್ತು 2024 ಸಾಲಿನಲ್ಲಿ ತೇರ್ಗಡೆ ಹೊಂದಿದ ಯಾವುದೇ ವಿಭಾಗದ (ಟೆಕ್ನಿಕಲ್ ಅಂಡ್ ನಾನ್ ಟೆಕ್ನಿಕಲ್) ಇಂಜಿನಿಯರಿಂಗ್ ಮತ್ತು ಡಿಪ್ಲೋಮೋ ಅಭ್ಯರ್ಥಿಗಳು ಹಾಗೂ ಬಿ.ಎ, ಬಿ.ಎಸ್ಸಿ ಬಿಕಾಂ,ಬಿಬಿಎ ಮತ್ತು ಬಿ ಸಿ ಎ ಪದವಿ ಪಡೆದ ಅಭ್ಯರ್ಥಿಗಳು ಈ ಮೇಳದಲ್ಲಿ ಭಾಗವಹಿಸಬಹುದು.

**ಪ್ರಮುಖ ಸುದ್ದಿ**

# ಸಮಾಜದಲ್ಲಿ ಮೆಚ್ಚುವವರು ಇದ್ದಾರೆ, ಚುಚ್ಚುವವರು ಇದ್ದಾರೆ

» **ಚಿತ್ರದುರ್ಗ**

ಸಮಾನತೆಯ ಹರಿಕಾರ ಬಸವಣ್ಣ, ಜಗತ್ತಿಗೆ ಶಾಂತಿಯ ಸಂದೇಶ ನೀಡಿದ ಮಹಮದ್ ಪೈಗಂಬರ್‌ರವರ ಮೇಲೆಯೂ ಆಪಾದನೆಗಳು ಬಂದಿದ್ದವು. ಎಲ್ಲವನ್ನು ಸಮಾಧಾನದಿಂದ ಸ್ವೀಕರಿಸಿ ಸಮಾಜಕ್ಕೆ ಬೆಳಕು ನೀಡಿದ ಮಹಾತ್ಮರು ಎಂದು ಹೊಸದುರ್ಗ ಸಾಣೆಹಳ್ಳಿಯ ಡಾ.ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ಜಮಾಅತೆ ಇಸ್ಲಾಮಿ ಹಿಂದ್ ವತಿಯಿಂದ ತ.ರಾ.ಸು.ರಂಗಮಂದಿರದಲ್ಲಿ ಮಂಗಳವಾರ ಹಮ್ಮಿಕೊಳ್ಳಲಾಗಿದ್ದ ಕುರಾನ್ ಪ್ರವಚನ ಉದ್ಘಾಟಿಸಿ ಮಾತನಾಡಿದರು.

ಸಮಾಜದಲ್ಲಿ ಮೆಚ್ಚುವವರು ಇದ್ದಾರೆ. ಚುಚ್ಚುವವರು ಇದ್ದಾರೆ. ಮೆಚ್ಚುಗೆಗೆ ಹಿಗ್ಗಬಾರದು, ಟೀಕೆಗೆ ಕುಗ್ಗಬಾರದು. ಎಲ್ಲವನ್ನು ಸಮಾನವಾಗಿ ಸ್ವೀಕರಿಸಿದಾಗ ಮಾತ್ರ ಯಶಸ್ವಿ ಜೀವನ ನಡೆಸಬಹುದು. ಅರಿವು ಜ್ಞಾನ ಇದ್ದ ಕಡೆ ಅಜ್ಞಾನ ನಿವಾರಣೆಯಾಗುತ್ತದೆ. ಭಾರತವನ್ನು ಸರ್ವ ಜನಾಂಗದ ಶಾಂತಿಯ ತೋಟ ಎಂದು ಕರೆಯುತ್ತಾರೆ.

ಪೈಗಂಬರ್, ಬಸವಣ್ಣ ಇನ್ನು ಅನೇಕ ಸಾಧು ಸಂತರುಗಳು ಸಿಹಿ ಕೊಟ್ಟಿದ್ದಾರೆ. ಆದರೆ ಸಿಹಿಯನ್ನು ಆಸ್ವಾದಿಸುವ ಮನಸ್ಸುಗಳು ಕಡಿಮೆಯಾಗುತ್ತಿರುವುದು ನೋವಿನ ಸಂಗತಿ ಎಂದು ಬೇಸರ



ವ್ಯಕ್ತಪಡಿಸಿದರು.

ಧರ್ಮ ಜಾತಿ ಹೆಸರಿನಲ್ಲಿ ಮತಾಂಧತೆ ಜಾಸ್ತಿಯಾಗುತ್ತಿದೆ. ಅದರಲ್ಲೂ ವಿದ್ಯಾವಂತರು ಹೆಚ್ಚು ಮತಾಂಧತೆಗೆ ಬಲಿಯಾಗುತ್ತಿರುವುದು ಅಪಾಯಕಾರಿ. ಅನೇಕ ಧರ್ಮ ಭಾಷೆಯವರು ದೇಶದಲ್ಲಿದ್ದಾರೆ. ಎಲ್ಲರೂ ಒಂದೆ ಎಂಬ ಭಾವನೆ ಮೂಡಬೇಕು. ಒಬ್ಬರು ಮತ್ತೊಬ್ಬರನ್ನು ಅಪ್ಪಿಕೊಳ್ಳುವ ಹೃದಯ ಶ್ರೀಮಂತಿಕೆ ಬೇಕು. ವಿದ್ಯೆ ವಿವೇಕವನ್ನು ಮೂಡಿಸುತ್ತದೆ. ಮಾನವರಲ್ಲಿ ನೈತಿಕ ಪ್ರಜ್ಞೆ ಹೆಚ್ಚಬೇಕು. ಧರ್ಮಾಂಧರಾಗಿ ಬದುಕುವ ವಾತಾವರಣ ನಿರ್ಮಾಣವಾಗಿದೆ. ಲಿಂಗಾಯಿತ ಧರ್ಮ, ಇಸ್ಲಾಂ ಧರ್ಮ ಬೇರೆಯಾದರೂ ಸಮಾನತೆಯಿದೆ. ದೇವನೊಬ್ಬ ನಾಮ ಹಲವು ಎಂದು ಪೈಗಂಬರ್ ಹೇಳಿದ್ದಾರೆ. ಮನುಷ್ಯ-ಮನುಷ್ಯರ ನಡುವೆ ಇರುವ ಗೋಡೆಯನ್ನು ಕಿತ್ತು ಒಳಗಿರುವ ಕ್ರೂರತ್ವವನ್ನು ಧಮನ ಮಾಡಬೇಕಿದೆ ಎಂದರು.

ಪ್ರೀತಿ, ಸೌಹಾರ್ಧತೆ, ಸಹಕಾರಿ, ಶಾಂತಿ ಜೀವನಕ್ಕೆ ಮುಖ್ಯ. ಒಬ್ಬರು ಮತ್ತೊಬ್ಬರನ್ನು ಗೌರವಿಸಬೇಕು. ಆದರ್ಶಗಳನ್ನು ಹೇಳುವುದಷ್ಟೆ ಅಲ್ಲ. ಜೀವನದಲ್ಲಿ ಪಾಲನೆಯಾಗಬೇಕು. ಎಲ್ಲಾ ಧರ್ಮಗಳು ಮಾನವ ಸೃಷ್ಠಿ. ಅತಿಯಾದ ಮತಾಂಧತೆ ಮನಸ್ಸಿನಲ್ಲಿ ಮೂಡಬಾರದು. ಅಹಂ ಮತ್ತಷ್ಟು ಅಪಾಯಕಾರಿ. ಪರಮ ಪವಿತ್ರವಾದ ಕುರಾನ್ ಬದುಕಿಗೆ ಬೇಕಾದ ಬೆಳಕು ನೀಡುತ್ತದೆ. ಯಾರನ್ನು ಉದಾಸೀನ ಮಾಡಬಾರದು. ದೈವಿ ಮಕ್ಕಳೆಂದು ಭಾವಿಸಿದರೆ ಶಾಂತಿ ನೆಲೆಸುತ್ತದೆ. ಸಂಪತ್ತಿನ ವ್ಯಾಮೋಹದ ಬದಲು ಜೀವನದಲ್ಲಿ ಶಾಂತಿ ನೆಮ್ಮದಿ ಯಾರಲ್ಲಿ ಇರುತ್ತದೋ ಅವರೆ ನಿಜವಾದ ಕುಬೇರರು ಎಂದು ಹೇಳಿದರು.ರೆವೆರೆಂಡ್ ಫಾದರ್ ಎಂ.ಎಸ್. ರಾಜು ಮಾತನಾಡಿ ಮೂಢನಂಬಿಕೆಗೆ ಯಾರು ಒಳಗಾಗುತ್ತಾರೋ ಅಂತಹವರು ಹಾಳಾಗುವುದು ಖಂಡಿತ. ಮನುಷ್ಯನಾಗಿ ಹುಟ್ಟಿದ ಮೇಲೆ ಕೈಲಾದಷ್ಟು ಒಳ್ಳೆ ಕೆಲಸ ಮಾಡಬೇಕು. ಏಸು, ಪೈಗಂಬರ್, ಬಸವಣ್ಣ ಇವರುಗಳೆಲ್ಲಾ ಮನುಕುಲಕ್ಕೆ ಶಾಂತಿಯ ಸಂದೇಶ ನೀಡಿದ್ದಾರೆ. ಪ್ರಾರ್ಥನೆಯಿಂದ ಜೀವನದಲ್ಲಿ ಯಶಸ್ಸು ಗಳಿಸಬಹುದು. ಪರಿಶುದ್ದತೆ, ಮೋಕ್ಷ ಪ್ರಾಪ್ತಿಯಾಗುತ್ತದೆ. ದೇಹದ ಶೃಂಗಾರಕ್ಕಿಂತ ಆತ್ಮ ಶುದ್ದತೆ ಮುಖ್ಯ. ನೆರೆಹೊರೆಯವರನ್ನು ದ್ವೇಷಿಸುವ ಬದಲು ಪ್ರೀತಿಸುವ ಗುಣ ಎಲ್ಲರಲ್ಲಿಯೂ ಮೂಡಬೇಕು ಎಂದರು.

ಶಾಂತಿ ಪ್ರಕಾಶನ ವ್ಯವಸ್ಥಾಪಕ ಮಂಗಳೂರಿನ ಜಿ.ಮಹಮದ್ ಕುಂಞಿ ಮಾತನಾಡಿ ಜಮಾಅತೆ ಇಸ್ಲಾಮಿ ಹಿಂದ್ ವತಿಯಿಂದ ಹಲವು ವರ್ಷಗಳಿಂದಲೂ ಸಾರ್ವಜನಿಕ ಕುರಾನ್ ಪ್ರವಚನ ಕಾರ್ಯಕ್ರಮವನ್ನು ನಿರಂತರವಾಗಿ ನಡೆಸಿಕೊಂಡು ಬರಲಾಗುತ್ತಿದೆ. ದೇವನು ಮಂಗಳಮಯನು. ವೈವಿದ್ಯತೆಯಿಂದ ಕೂಡಿರುವ ದೇಶ ನಮ್ಮದು. ಪರಸ್ಪರ ತಪ್ಪು ಕಲ್ಪನೆ, ಅಪ ನಂಬಿಕೆಯನ್ನು ಹೋಗಲಾಡಿಸುವ ಪ್ರಕ್ರಿಯೆಗೆ ಮಹತ್ವವಿದೆ. ಎಲ್ಲಾ ರೀತಿಯ ಸೌಲತ್ತುಗಳಿದ್ದರೂ ಮನುಷ್ಯ ಒತ್ತಡ, ಹತಾಶೆ, ಭಯ, ಭ್ರಮೆಯಿಂದ ಬದುಕುತ್ತಿದ್ದಾನೆ. ಮೌಲ್ಯವಿಲ್ಲದಂತಾಗಿದೆ. ಜೀವನದಲ್ಲಿ ಎಷ್ಟೆ ಕಷ್ಟಗಳು ಎದುರಾದರೂ ಭಯಪಡಬಾರದು. ಧಾರ್ಮಿಕ ಗ್ರಂಥ ಕುರಾನ್, ಬೈಬಲ್, ಬಸವಣ್ಣನವರ ವಚನಗಳಲ್ಲಿ ಮೌಲ್ಯಗಳಿವೆ ಎಂದು ನುಡಿದರು.ಬದುಕಿಗೆ ಬೇರೆ ಬೇರೆ ವ್ಯಾಖ್ಯಾನಗಳಿವೆ. ಬದುಕು ಒಂದು ಪರೀಕ್ಷೆ ಎಂದು ಕುರಾನ್ ಹೇಳುತ್ತದೆ. ಎಲ್ಲರ ಬದುಕಿನಲ್ಲೂ ಏರಿಳಿತವಿದೆ. ಸುಖ, ದುಃಖ, ಕಣ್ಣೀರು, ನೆಮ್ಮದಿಯಿಂದ ಬದುಕು ಕೂಡಿದೆ ಎಂದು ತಿಳಿಸಿದರು.ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ಉದ್ಯಮಿ ಹಾಜಿ ಆರ್.ದಾದಾಪೀರ್, ಡಾ.ರಹಮತ್‌ವುಲ್ಲಾ, ಜುಬೇರ್ ಅನ್ಸಾರಿ, ಸಿರಾಜ್ ವೇದಿಕೆಯಲ್ಲಿದ್ದರು.ನವೀನ್ ಮಸ್ಕಲ್ ವಂದಿಸಿದರು. ಜಮಾಅತೆ ಹಿಸ್ಲಾಮಿ ಹಿಂದ್ ಸದಸ್ಯ ಅಕ್ರಮುಲ್ಲಾ ಷರೀಫ್ ನಿರೂಪಿಸಿದರು.

## ಫಾಸ್ಟ್ ನ್ಯೂಸ್

### ಗ್ರಂಥಾಲಯ ಮೇಲ್ವಿಚಾರಕರ ನೇಮಕಾತಿ ಅಧಿಸೂಚನೆ

» ದಾವಣಗೆರೆ

ದಾವಣಗೆರೆ ಜಿಲ್ಲಾ ವ್ಯಾಪ್ತಿಯ ಚನ್ನಗಿರಿ ತಾಲ್ಲೂಕು ರಾಜಗೊಂಡನಹಳ್ಳಿ ಗ್ರಾಮ ಪಂಚಾಯಿತಿ ಮತ್ತು ಹರಿಹರ ತಾಲ್ಲೂಕು ಕೊಂಡಜ್ಜಿ ಗ್ರಾಮ ಪಂಚಾಯಿತಿಯಲ್ಲಿ ಖಾಲಿಯಿರುವ ಗ್ರಂಥಾಲಯ ಮೇಲ್ವಿಚಾರಕರ ಹುದ್ದೆಯ ನೇಮಕಾತಿ ಅಧಿಸೂಚನೆಯನ್ನು ಆಡಳಿತಾತ್ಮಕ ಕಾರಣಗಳಿಂದ ಹಿಂಪಡೆಯಲಾಗಿದೆ. ಆದರೆ ಜೂನ್ 27 ರಂದು ಜಿಲ್ಲಾ ಪಂಚಾಯತ್ ಕಚೇರಿಯಿಂದ ಹೊರಡಿಸಲಾದ ಅಧಿಸೂಚನೆಯಲ್ಲಿನ ಷರತ್ತುಗಳು ಯಥಾ ರೀತಿ ಮುಂದುವರೆಯುತ್ತವೆ ಎಂದು ಜಿ.ಪಂ ಉಪಕಾರ್ಯದರ್ಶಿ ಹಾಗೂ ಗ್ರಾಪಂ ಗ್ರಂಥಾಲಯ ಮೇಲ್ವಿಚಾರಕರ ನೇಮಕಾತಿ ಸಮಿತಿಯ ಸದಸ್ಯ ಕಾರ್ಯದರ್ಶಿ ತಿಳಿಸಿದ್ದಾರೆ.

### ರಾಷ್ಟ್ರೀಯ ನೇತ್ರದಾನ ಪಾಕ್ಷಿಕ ಆಚರಣೆ

» ದಾವಣಗೆರೆ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಅಂಧತ್ವ ಮತ್ತು ದೃಷ್ಟಿ ದೋಷ ನಿಯಂತ್ರಣ ವಿಭಾಗ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಸಿದ್ದಗಂಗಾ ವಿದ್ಯಾಸಂಸ್ಥೆ, ದಾವಣಗೆರೆ ಇವರ ಸಹಯೋಗದಲ್ಲಿ ಸೆ.5 ರಂದು ಬೆಳಿಗ್ಗೆ 10.30 ಕ್ಕೆ ನಗರದ ಸಿದ್ದಗಂಗಾ ವಿದ್ಯಾಸಂಸ್ಥೆಯಲ್ಲಿ ನಿಮ್ಮ ನೇತ್ರಗಳು ಸದಾ ಜೀವಂತವಾಗಿರಲಿ, ನೇತ್ರದಾನ ಮಾಡಿ ಅಂಧರ ಬಾಳಿಗೆ ಬೆಳಕಾಗಿ ಎಂಬ ಘೋಷವಾಕ್ಯದೊಂದಿಗೆ 39ನೇ ರಾಷ್ಟ್ರೀಯ ನೇತ್ರದಾನ ಪಾಕ್ಷಿಕ ಆಚರಣೆಯನ್ನು ಆಯೋಜಿಸಲಾಗಿದೆ. ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಹಣಾಧಿಕಾರಿ ಸುರೇಶ್.ಬಿ.ಇಟ್ನಾಳ್ ಕಾರ್ಯಕ್ರಮ ಉದ್ಘಾಟಿಸುವರು. ಶ್ರೀಸಿದ್ದಗಂಗಾ ವಿದ್ಯಾಸಂಸ್ಥೆಯ ಮುಖ್ಯಸ್ಥರಾದ ಜಸ್ಟಿನ್ ಡಿಸೋಜ ಅಧ್ಯಕ್ಷತೆ ವಹಿಸುವರು. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯಕಾರ್ಯದರ್ಶಿ ಮಹಾವೀರ ಮ. ಕರೆಣ್ಣನವರ ಉಪಸ್ಥಿತರಿರುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಷಣ್ಮುಖಪ್ಪ, ವಿಶ್ವವಿದ್ಯಾನಿಯಲಯ ರಾಷ್ಟ್ರೀಯ ಸೇವಾ ಯೋಜನೆಯ ಪ್ರಾಧ್ಯಾಪಕರು ಹಾಗೂ ಸಂಯೋಜನಾಧಿಕಾರಿ ಡಾ.ಅಶೋಕ ಕುಮಾರ ಪಾಳೇದ, ಜಿಲ್ಲಾ ಕುಷ್ಠರೋಗ ನಿವಾರಣಾಧಿಕಾರಿ ಹಾಗೂ ಜಿಲ್ಲಾ ಅಂಧತ್ವ ಮತ್ತು ದೃಷ್ಟಿದೋಷ ನಿಯಂತ್ರಣಾಧಿಕಾರಿ ಡಾ. ಮಂಜುನಾಥ್ ಎಲ್. ಪಾಟೀಲ್ ಭಾಗವಹಿಸುವರು. ನೇತ್ರ ತಜ್ಞರಾದ ಡಾ. ಸವಿತಾ ಸಂಪನ್ಮೂಲ ವ್ಯಕ್ತಿಗಳಾಗಿ ಪಾಲ್ಗೊಳ್ಳುವರು.

### ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ

» ದಾವಣಗೆರೆ

ಪ್ರಸಕ್ತ ಸಾಲಿನ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯನ್ನು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಶಾಮನೂರು ಟಿ. ಬಸವರಾಜ್ ಇವರ ಅಧ್ಯಕ್ಷತೆಯಲ್ಲಿ ಸೆಪ್ಟೆಂಬರ್ 10 ರಂದು ಮಧ್ಯಾಹ್ನ 3 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆಯಲಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ ಇಟ್ನಾಳ್ ತಿಳಿಸಿದ್ದಾರೆ.

### ಪ್ಲಾಸ್ಟಿಕ್ ಕಪ್, ಹಾಳೆ, ಗುಟ್ಕಾ, ಸಿಗರೇಟ್‌ಗಳ ಮಾರಾಟ ನಿಷೇಧ

» ದಾವಣಗೆರೆ

ದಾವಣಗೆರೆ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ವ್ಯಾಪಾರ ಮಾಡುವ ಬೀದಿಬದಿ ವ್ಯಾಪಾರಿಗಳು ಈ ಹಿಂದೆ ಪಾಲಿಕೆಯಿಂದ ನೋಂದಾಯಿಸಲ್ಪಟ್ಟ, ನೋಂದಣಿ ಮಾಡಿಸದೇ ಇರುವ ಬೀದಿಬದಿ ವ್ಯಾಪಾರಿಗಳು ನಗರದ ರಸ್ತೆ ಬದಿಗಳಲ್ಲಿ ಸಾರ್ವಜನಿಕರಿಗೆ, ವಾಹನ ಸಂಚಾರಕ್ಕೆ ರಸ್ತೆಗಳ ಸ್ವಚ್ಛತೆಗೆತೊಂದರೆಯಾಗುವಂತೆತಳ್ಳುವಗಾಡಿಗಳಲ್ಲಿ ಚಹಾ, ತಿಂಡಿ, ಪ್ಲಾಸ್ಟಿಕ್ ಕಪ್, ಗುಟ್ಕಾ, ಸಿಗರೇಟ್‌ಗಳ ಮಾರಾಟ ಮಾಡುತ್ತಿದ್ದು. ಅದರಿಂದ ಉತ್ಪತ್ತಿಯಾದ ತ್ಯಾಜ್ಯಗಳನ್ನು ರಸ್ತೆ, ಚರಂಡಿ, ಖಾಲಿನಿವೇಶನಗಳಲ್ಲಿ ಹಾಕಿ ಸುಡುತ್ತಿರುವುದು ಕಂಡುಬಂದಿರುತ್ತದೆ. ಇದರಿಂದಾಗಿ ಚರಂಡಿಗಳು ಬ್ಲಾಕ್ ಆಗಿ ಸೊಳ್ಳೆಗಳ ಸಂತಾನೋತ್ಪತ್ತಿಗೆ ಕಾರಣವಾಗುವುದಲ್ಲದೇ, ವಾಯುಮಾಲಿನ್ಯಕ್ಕೂ ಕಾರಣವಾಗಿರುತ್ತದೆ. ಆದ್ದರಿಂದ ಎಲ್ಲಾ ಬೀದಿಬದಿ ವ್ಯಾಪಾರಿಗಳು ಸಾರ್ವಜನಿಕ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವಂತಹ ಪ್ಲಾಸ್ಟಿಕ್ ಹಾಳೆಗಳು, ಪ್ಲಾಸ್ಟಿಕ್ ಕಪ್, ಗುಟ್ಕಾ, ಸಿಗರೇಟ್‌ಗಳ ಮಾರಾಟ ಮಾಡದಂತೆ ಹಾಗೂ ಕಸವನ್ನು ಹೊರಗಡೆ ಚೆಲ್ಲಿ ಸುಡದಂತೆ ಎರಡು ತ್ಯಾಜ್ಯ ಸಂಗ್ರಾಹಕಗಳನ್ನಿರಿಸಿ, ತ್ಯಾಜ್ಯವನ್ನು ನಿಗದಿತ ತ್ಯಾಜ್ಯ ಸಂಗ್ರಹಕಾರರಿಗೆ ಬಳಕೆದಾರರ ಶುಲ್ಕ ಪಾವತಿಸಿ ನೀಡಬೇಕು ಎಂದು ಸೂಚಿಸಲಾಗಿದ್ದು. ಒಂದು ವೇಳೆ ಸೂಚನೆಗಳನ್ನು ಉಲ್ಲಂಘಿಸಿ ನಗರ ಸ್ವಚ್ಛತೆಗೆ ಧಕ್ಕೆಯುಂಟು ಮಾಡುವುದು ಕಂಡುಬಂದಲ್ಲಿ ದಂಡ ವಿಧಿಸುವುದರೊಂದಿಗೆ ತೆರವುಗೊಳಿಸಲು ಕ್ರಮವಹಿಸಲಾಗುವುದು.

# ಹಿಂದು ಮಹಾ ಗಣಪ ಪುರ ಪ್ರವೇಶ

» ಚಿತ್ರದುರ್ಗ

ವಿಶ್ವಹಿಂದು ಪರಿಷತ್– ಬಜರಂಗದಳದವತಿ ಯಿಂದ ಪ್ರತಿ ವರ್ಷದಂತೆ ಈ ವರ್ಷವೂ ಹಿಂದೂ ಮಹಾ ಗಣಪತಿ ಪ್ರತಿಷ್ಟಾಪನೆಯಾಗಲಿದೆ ಚಿತ್ರದುರ್ಗ ನಗರದ ಹೆಸರಾಂತ ಹಿಂದು ಮಹಾ ಗಣಪತಿಯು ಚಿಕ್ಕಬಳ್ಳಾಪುರದಿಂದ ಇಂದು ನಗರವನ್ನು ಪ್ರವೇಶ ಮಾಡಿದ್ದು ಅಸಂಖ್ಯಾತ ಭಕ್ತಾಧಿಗಳು ಹಿಂದು ಮಹಾ ಗಣಪತಿಯನ್ನು ಅದ್ದೂರಿಯಾಗಿ ಸ್ವಾಗತ ಮಾಡಿದರು,



ನಗರದ ಹೊರ ವಲಯದ ಶ್ರೀ ಮಾದಾರ ಗುರುಪೀಠದಿಂದ ನಗರದ ಬಿ.ಡಿ.ರಸ್ತೆಯ ಜೈನಧಾಮದಲ್ಲಿ ನಿರ್ಮಾಣ ಮಾಡಿರುವ ಮಹಾ ಮಂಟಪದವರೆಗೂ ಗಣಪತಿಯನ್ನು ಭಕ್ತಾಧಿಗಳು ದ್ವಿಚಕ್ರವಾಹನದಲ್ಲಿ ಗಣಪತಿಯ ಪರವಾಗಿ ಜೈಕಾರಗಳನ್ನು ಕೂಗುತ್ತಾ ಹಿಂದು ಸಮಾಜದ ಸಂಕೇತವಾದ ಕೇಸರಿ ಧ್ವಜಗಳನ್ನು ಹಿಡಿದು ಘೋಷಣೆಗಳನ್ನು ಕೂಗುತ್ತಾ ಗಣಪತಿಯನ್ನು ಸ್ವಾಗತ ಮಾಡಿದರು. ನಗರದ ಚಳ್ಳಕೆರೆ ಗೇಟಿನಿಂದ ಶಾರದ ಬ್ರಾಸ್ ಬ್ಯಾಂಡ್ ಹಾಗೂ ಟಾಷ್ಯೂ ಸೇರಿದಂತೆ ವಿವಿಧ ಜಾನಪದ ಕಲಾಮೇಳದೊಂದಿಗೆ ಹಿಂದೂ ಮಹಾ ಗಣಪತಿಯನ್ನು ಸ್ವಾಗತ ಮಾಡಲಾಯಿತು. ಗಣಪತಿಯ ಮುಂದೆ ಯುವ ಜನತೆ ನೃತ್ಯವನ್ನು ಮಾಡುವುದರ ಮೂಲಕ ತಮ್ಮ ಸಂತೋಷವನ್ನು ವ್ಯಕ್ತಪಡಿಸಿದರು.

ಚಿಕ್ಕಬಳಾಪುರದಲ್ಲಿ ನಿರ್ಮಾಣವಾದ ಗರುಡವಾಹನದ ಮೇಲೆ ವಿರಾಜಮಾನವಾಗಿ ಕುಳಿತಿರುವ ಹಿಂದು ಮಹಾ ಗಣಪತಿಯನ್ನು ಸಮಿತಿಯವರು ವರ್ಷದಿಂದ ವರ್ಷಕ್ಕೆ ವಿಭಿನ್ನ ರೀತಿಯಲ್ಲಿ ನಿರ್ಮಾಣ ಮಾಡುವುದರ ಮೂಲಕ ರಾಜ್ಯದಲ್ಲಿಯೇ ಚಿತ್ರದುರ್ಗದ ಹಿಂದೂ ಮಹಾ ಗಣಪತಿ ವಿಭಿನ್ನ ಎಂದು ತೋರಿಸುತ್ತಿದ್ದಾರೆ. ಇಂದು ಮಂಟಪಕ್ಕೆ ಆಗಮಿಸಿ ಗಣಪತಿಯನ್ನು ಕುಳ್ಳರಿಸಿ ತದ ನಂತರ ವಿವಿಧ ರೀತಿಯ ಅಲಂಕಾರಗಳನ್ನು ಮಾಡಲಾಗುತ್ತದೆ ಸೆ.7ಕ್ಕೆ ಪೂಜೆಗೆ ಸಿದ್ದಗೊಳಿಸಲಾಗುತ್ತದೆ. ಆರು ಕೈಗಳನ್ನು ಹೊಂದಿರುವ ಗಣಪತಿ ವಿವಿಧ ರೀತಿಯ ಆಯುಧಗಳನ್ನು ಹಿಡಿದಿದ್ದಾನೆ, ಕೆಳಗಡೆ ಗರುಡ ತನ್ನ ಹಾರಾಟವನ್ನು ಮಾಡುತ್ತಿದೆ. ಗಣಪತಿಯ ಹಿಂದೆಗಡೆಯಲ್ಲಿ ಚಕ್ರವನ್ನು ನಿರ್ಮಾಣ ಮಾಡಲಾಗಿದ್ದು, ಪೀಠದಿಂದ ಗಣಪತಿ ಸುಮಾರು 17 ರಿಂದ 18 ಅಡಿ ಎತ್ತರ ಇದೆ.

ಈಗಾಗಲೇ ಜೈನಧಾಮದಲ್ಲಿ ಹಿಂದು ಮಹಾಗಣಪತಿಯನ್ನು ಸ್ಥಾಪನೆ ಮಾಡಲು ಸಕಲ ಸಿದ್ದತೆಯನ್ನು ಸಹಾ ಮಾಡಲಾಗಿದೆ ಮುಂದಗಡೆಯಲ್ಲಿ ಸಾಗರ ಕಾರ್ಕಳದಿಂದ ಬಂದ ಶಿಲ್ಪಗಳು ಸಭಾ ಮಂಟಪವನ್ನು ನಿರ್ಮಾಣ ಮಾಡುತ್ತಿದ್ದಾರೆ, ಗಣಪತಿ ಕುಳ್ಳರಿಸುವ ಸಭಾ ಮಂಟಪದಲ್ಲಿ ದಶಾವತಾರದ ಮಂಟಪವನ್ನು ನಿರ್ಮಾಣ ಮಾಡಲಾಗುತ್ತಿದೆ. ಮಂಟಪ ಮಹಾರಾಜರ ಅರಮನೆಯ ಮಾದರಿಯನ್ನು ಹೋಲುತ್ತಿದೆ. 21 ದಿನಗಳ ಕಾಲ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. 26 ರಂದು ಕನಕ ವೃತ್ತದಿಂದ ಹೊರಡುವ ಬೈಕ್ ರ್‍ಯಾಲಿ ನಗರದೆಲ್ಲೆಡೆ ಸಂಚರಿಸಲಿದ್ದು, 28 ರಂದು ವಿಸರ್ಜಿಸಲಾಗುವುದೆಂದರು. ಪ್ರತಿನಿತ್ಯ ಬೆಳಿಗ್ಗೆ ಮತ್ತು ಸಂಜೆ ಹದಿಮೂರಕ್ಕೂ ಹೆಚ್ಚು ರೀತಿಯ ಮಹಾ ಮಂಗಳಾರತಿ ನಡೆಯಲಿದೆ.







ರೈತರಿಗೆ ನಿಗಧಿತವಾದ ಬೆಲೆ ಸಿಗಲಿಲ್ಲ ಎಂದರೆ ಸೆ.9 ರಂದು ಜಿಲ್ಲಾಧಿಕಾರಿಯವರ ಕಛೇರಿಗೆ ಮುತ್ತಿಗೆ

## ರೈತರು ಸಾವೆಯನ್ನ ಒಣಗಿಸಿ ತಂದಂತಹ ರೈತರಿಗೆ ಒಂದು ರೇಟು ಹಸಿ ಇದ್ದಂತಹ ಸಾವೆಗೂ ಸಹ ಒಂದು ರೇಟು

» ಹೊಸದುರ್ಗ

ರೈತರು ಸಾವೆಯನ್ನ ಬೆಳೆಯುವ ಮುಂಚೆ 3500 ಹಾಗೂ 4 ಸಾವಿರ ಇದ್ದಂತೆ ಸಾವೆ, ಸೆ. 2 ರಂದು ಸೋಮವಾರದ ಹೊಸದುರ್ಗ ಎಪಿಎಂಸಿ ಮಾರುಕಟ್ಟೆಯಲ್ಲಿ ಧಿಡೀರನೆ 2800 ಕ್ಕೆ ಬಂದು ನಿಂತಿದೆ. ಇದರಿಂದ ಸಾವೆ ಬೆಳೆದ ರೈತರು ಕಂಗಾಲಾಗಿದ್ದಾರೆ ಎಂದು ತಾಲೂಕು ರೈತ ಸಂಘದ ಅಧ್ಯಕ್ಷ ಡಿ. ಬೋರೇಶ್ ಹೇಳಿದರು.ಪಟ್ಟಣದ ರೈತ ಸಂಘದ ಕಛೇರಿಯಲ್ಲಿ ಬುಧವಾರ ಸುದ್ದಿಗೋಷ್ಟಿ ನಡೆಸಿ ಮಾತನಾಡಿದ ಅವರು ರೈತರು ಸಾವೆಯನ್ನ ಒಣಗಿಸಿ ತಂದಂತಹ ರೈತರಿಗೆ ಒಂದು ರೇಟು ಹಸಿ ಇದ್ದಂತಹ ಸಾವೆಗೂ ಸಹ ಒಂದು ರೇಟು ಮಾಡಿದ್ದಾರೆ. ವರ್ತಕರು ಸಾವೆಯನ್ನು ನೋಡಿ ಸರಿಯಾದಂತಹ ಸಾವೆಗೆ ನಿಗಿಧಿತವಾದ ಬೆಲೆಯನ್ನು ಕಟ್ಟಬೇಕಾಗಿತ್ತು. ಆ ಸಂಧರ್ಬದಲ್ಲಿ ರೈತರನ್ನಸಂಕಷ್ಟಕ್ಕೆತಂದಂತಹಸಂಧರ್ಬವಾಗಿದೆ. ಕೃಷಿ ಮಾರುಕಟ್ಟೆಯಲ್ಲಿ ದಲ್ಲಾಳಿಗಳು ಬಾಯಿಗೆ ಬಂದಂತೆ ಸಾವೆಯನ್ನ ಖರೀದಿ ಮಾಡಿ



ರೈತರನ್ನ ಸಂಕಷ್ಟಕ್ಕೆ ದೂಡಿದ್ದಾರೆ.

ಈ ಹಿನ್ನೆಲೆಯಲ್ಲಿ ನಮ್ಮ ರೈತ ಸಂಘ ಅನಿರ್ಧಿಷ್ಟವಾದ ಉಗ್ರ ಹೋರಾಟ ಮಾಡುವುದಾಗಿ ತೀರ್ಮಾನಿಸಿದ್ದೇವೆ. ಸಾವೆ ಒಂದು ಕ್ವಿಂಟಲ್‌ಗೆ ಮೂರುವರೆಯಿಂದ ನಾಲ್ಕು ಸಾವಿರಕ್ಕೆ ಬರಲೇಬೇಕು, ಕಾರಣ ಇಂದು ರೈತರು ಸಾವೆಯನ್ನ ಕಟಾವು ಮಾಡಿಸಿರುವ ಕೂಲಿಯೂ ಸಹಾ ಸಿಗದಂತಾಗಿದೆ. ಒಂದು ಎಕರೆ ಸಾವೆ ಕಟಾವು ಮಾಡಿಸಲು ಸುಮಾರು 2500 ರಿಂದ 3000 ಸಾವಿರ ರೂ ಖರ್ಚಾಗಿದೆ

ಸಾವೆ ಬೆಳೆಯಲು ರೈತರು ತುಂಭಾ ಖರ್ಚು ಮಾಡಿದ್ದಾರೆ ಅವರಿಗೆ ಲಾಭ ಸಿಗುವುದಿರಲಿ ಅಸಲು ಸಿಕ್ಕರೆ ಸಾಕು ಎಂಬಂತಾಗಿದೆ. ಈ ನಿಟ್ಟಿನಲ್ಲಿ ಸರ್ಕಾರ ಎಚ್ಚೆತ್ತು ಸಾವೆಗೆ ನಿಗಧಿತ ಬೆಲೆಯನ್ನ ಮಾಡಬೇಕು ಎಂದು ಸರ್ಕಾರಕ್ಕೆ ಒತ್ತಾಯಿಸಿದ ಅವರು ಸೋಮವಾರ ಒಳಗೆ ರೈತರಿಗೆ ನಿಗಧಿತವಾದ ಬೆಲೆ ಸಿಗಲಿಲ್ಲ ಎಂದರೆ ಸೆ.9 ರಂದು ಸೋಮವಾರ ಜಿಲ್ಲಾಧಿಕಾರಿಯವರ ಕಛೇರಿಗೆ ಮುತ್ತಿಗೆ ಹಾಕಿ ಹೋರಾಟ ಮಾಡಬೇಕು ಎಂದು ನಿರ್ಧರಿಸಿದ್ದೇವೆ ಎಂದರು.

ರೈತರು ಕಟಾವು ಮಾಡುವ ಸಂಧರ್ಬದಲ್ಲಿ ಮಳೆ ಬಂತು ಮಳೆ ಬಂದು ಸಾಕಷ್ಟು ರೈತರ ಸಾವೆ ನೆಂದು ಹೋಗಿವೆ, ಒಣ ಹಾಕಲು ಬಿಸಿಲಿಲ್ಲ ಈ ನಿಟ್ಟಿನಲ್ಲಿ ರೈತರ ಪರುಸ್ಥಿತಿ ಕೂಡ ಹದಗೆಟ್ಟಿದೆ. ನಿಗದಿತ ಬೆಲೆ ಸಿಗುವವರೆಗೂ ಬೆಳೆದ ಸಾವೆಯನ್ನ ರೈತರು ಮನೆಯಲ್ಲಿ ಇಟ್ಟುಕೋಳ್ಳಲು ಹಾಗುತ್ತಿಲ್ಲ ಕಾರಣ ಸಾಲದಬಾದೆ ಕೂಲಿಯವರಿಗೆ, ಟ್ಯಾಕ್ಟರ್ ಒಡೆದವರಿಗೆ, ಮಕ್ಕಳ ವಿದ್ಯಾಭ್ಯಾಸಕ್ಕೆ ಹಣ ಕಟ್ಟಲು ಸಾವೆಯ ಹಣ ಬಹಳ ಮುಖ್ಯವಾಗಿರುತ್ತದೆ ಇದರಿಂದ ಯಾವ ರೈತರೂ ಕೂಡ ಸಾವೆಯನ್ನ ಸ್ಟಾಕ್ ಮಾಡಲು ಹಾಗುತ್ತಿಲ್ಲ ಎಂದರು.

## ಪರಿಸರ ಸ್ನೇಹಿ ಗಣಪತಿ ಪೂಜಿಸಿ

» ಚಿತ್ರದುರ್ಗ

ಗಣಪತಿಯ ಆಚರಣೆಯ ಸಂಪ್ರದಾಯಗಳನ್ನು ಎಲ್ಲರೂ ಒಟ್ಟಾಗಿ



ವೈಜ್ಞಾನಿಕ, ವೈಚಾರಿಕ, ಐತಿಹಾಸಿಕ ಮತ್ತು ಸಾಮಾಜಿಕ ಕಳಕಳಿಯಿಂದ ಆಚರಿಸೋಣ ಎಂದು ವಿಜ್ಞಾನ ಕಾರ್ಯಕರ್ತ ಎಚ್.ಎಸ್.ಟಿ.ಸ್ವಾಮಿ ತಿಳಿಸಿದ್ದಾರೆ.ಈ ಬಗ್ಗೆ ಪ್ರತಿಕಾ ಪ್ರಕಟಣೆಯನ್ನು ನೀಡಿರುವ ಅವರು ಪ್ರತಿವರ್ಷ ನಾವೆಲ್ಲರೂ ರಾಷ್ಟ್ರೀಯ ಭಾವೈಕ್ಯತೆ, ಪೌರಾಣಿಕ ಹಾಗೂ ಸಾಮಾಜಿಕ ಹಿನ್ನೆಲೆಯಿಂದ "ಗಣೇಶ ಚತುರ್ಥಿ"ಯನ್ನು ನಾಡಿನ ಎಲ್ಲಾ ಕಡೆ ಸಂಭ್ರಮ, ಸಡಗರದಿಂದ ಆಚರಿಸಲಾಗುತ್ತದೆ. ಮೊದಮೊದಲು ನಮ್ಮ ಹಿರಿಯರು ಮಣ್ಣು, ಬೆಳ್ಳಿಯಿಂದ ಮಾಡಿದ ಗಣಪತಿ ಮೂರ್ತಿಗಳನ್ನು ಮನೆ ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಪ್ರತಿಷ್ಠಾಪಿಸಿ, ಪೂಜಿಸಿ ನಂತರ ಬಾವಿ,ಕೆರೆ, ನದಿ ಮತ್ತು ಸಮುದ್ರದಲ್ಲಿ ವಿಸರ್ಜಿಸುತ್ತಿದ್ದರು. ಆದರೆ ಇತ್ತೀಚಿನ ದಿನಗಳಲ್ಲಿ ಆಡಂಬರ, ಆಧುನಿಕತೆಯ ಹೆಸರಲ್ಲಿ ಪ್ಲಾಸ್ಟರ್ ಆಫ್ ಪ್ಯಾರಿಸ್ ನಿಂದ ಗಣಪತಿ ಮೂರ್ತಿಗಳನ್ನು ತಯಾರಿಸಿ, ಆರೋಗ್ಯಕರವಲ್ಲದ ರಾಸಾಯನಿಕ ಬಣ್ಣ ಬಳಿದು ಮಾರಾಟ ಮಾಡಲಾಗುತ್ತದೆ. ಅಂತಹ ಮೂರ್ತಿಗಳನ್ನು ತಂದು ಪೂಜಿಸಿ ಕುಡಿಯುವ ಜಲಚರ ಪ್ರಾಣಿಗಳಿರುವ ಬಾವಿ,ಕೆರೆ, ಹಳ್ಳ ಮತ್ತು ನದಿಗಳಲ್ಲಿ ವಿಸರ್ಜಿಸಲಾಗುತ್ತಿದೆ. ಪ್ಲಾಸ್ಟರ್ ಆಫ್ ಪ್ಯಾರಿಸ್ ಎಂಬುದು ಬಿಳಿ ಪೌಡರ್ ರೂಪದ ಒಂದು ರಾಸಾಯನಿಕ ವಸ್ತು. ಇದು ನೀರಿನೊಂದಿಗೆ ಬೆರೆತು ಗಟ್ಟಿಯಾಗಿ ಮಾರ್ಪಟ್ಟು, ನೀರಿನಲ್ಲಿ ಇನ್ನೆಂದೂ ಕರಗದ ಸ್ಥಿತಿ ತಲುಪುತ್ತದೆ. ಮೂರ್ತಿಯ ಅಂದ ಹೆಚ್ಚಿಸಲು ಲೇಪಿಸಿದ ಬಣ್ಣಗಳಿಂದ ಕ್ಯಾನ್ಸರ್ ಬರುವ ಸಾಧ್ಯತೆ ಹೆಚ್ಚು. ಇಂತಹ ವಿಷವಸ್ತು ನೀರಿಗೆ ಹಾಕಿದಾಗ ಹೊರಬಂದು ಜಲಚರ ಪ್ರಾಣಿಗಳ ದೇಹ ಹೊಕ್ಕು ಪ್ರಾಣಕ್ಕೆ ಕಂಟಕ ತರುತ್ತದೆ.

**ಪ್ರಮುಖ ಸುದ್ದಿ**

# ಒಳ ಮೀಸಲಾತಿ ಜಾರಿಗೆ ರಾಜ್ಯ ಸರ್ಕಾರ ವಿಫಲ: ಆಪ್

» ಚಿತ್ರದುರ್ಗ

30 ವರ್ಷಗಳ ಕಾಲ ನಿರಂತರ ಹೋರಾಟದಿಂದ ಒಳ ಮೀಸಲಾತಿ ಜಾರಿ ಕುರಿತು ಸುಪ್ರೀಂ ಕೋರ್ಟ್ ಅನುಮತಿ ನೀಡಿದೆ ಆದರೆ ಅಂದಿನಿಂದ ಇಂದಿನವರೆಗೂ ಕೂಡ ರಾಜ್ಯ ಸರ್ಕಾರ ಅನುಮೋದನೆ ಮಾಡುವುದರಲ್ಲಿ ವಿಫಲವಾಗಿದೆ ಎಂದು ಅಮ್ ಆದ್ಮಿ ಪಾರ್ಟಿ ಕರ್ನಾಟಕ. ಚಿತ್ರದುರ್ಗ ಜಿಲ್ಲೆ ಘಟಕ ಆರೋಪಿಸಿದೆ.



ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅಮ್ ಆದ್ಮಿ ಪಾರ್ಟಿ ಕರ್ನಾಟಕ. ಚಿತ್ರದುರ್ಗ ಜಿಲ್ಲೆ ಘಟಕದ ಅಧ್ಯಕ್ಷರಾದ ಬಿ.ಇ.ಜಗದೀಶ್ ಮಾತನಾಡಿ, ಕಡು ಬಡತನದಲ್ಲಿ ಜನಿಸಿದ ಅದೆಷ್ಟೋ ಜನಾಂಗದವರು ಇಂದಿಗೂ ಕೂಡ ಬಡತನ ರೇಖೆಗಿಂತ ಕೆಳ ವರ್ಗದಲ್ಲೇ ಇದ್ದಾರೆ ಇಂಥವರಿಗೆ ಒಳ ಮೀಸಲಾತಿ ಜಾರಿ ಆಗುವುದರಿಂದ ಅವರ ಆರ್ಥಿಕ ಅಭಿವೃದ್ಧಿಯು ಸಹ ವೃದ್ಧಿಸಲಿದೆ ಅಷ್ಟೇ ಅಲ್ಲದೆ ಒಳ ಮೀಸಲಾತಿ ಜಾರಿ ಆಗುವುದರಿಂದ ಅದೆಷ್ಟು ಕುಟುಂಬಗಳು ಆರ್ಥಿಕವಾಗಿ ಸದೃಢರಾಗಲು ಸಾಧ್ಯವಾಗುತ್ತವೆ.ಬಹುತೇಕ ರಾಜಕಾರಣಿಗಳು ಮೀಸಲಾತಿಯ ಅವಕಾಶವನ್ನು ಪಡೆದುಕೊಂಡು ಸಾಕಷ್ಟು ಅಭಿವೃದ್ಧಿ ಹೊಂದಿದ್ದಾರೆ ಅಂತಹ ರಾಜಕಾರಣಿ ವ್ಯಕ್ತಿಗಳೇ ಇಂದು ಒಳ ಮೀಸಲಾತಿಯ ಕನೆ ಪದರು ಒಪ್ಪಿಕೊಳ್ಳಲು ಸಾಧ್ಯವಾಗುತ್ತಿಲ್ಲ ಎನ್ನುವುದು ಸಮುದಾಯಕ್ಕೆ ಮಾಡಿದ ಮೋಸವೆಂದರೆ ತಪ್ಪಾಗಲಾರದು ಎಂದು ತಿಳಿಸಿದರು.

ಮಾದಿಗ ಸಮುದಾಯದವರು ನಿರಂತರ ಹೋರಾಟದಿಂದ ಒಳ ಮೀಸಲಾತಿಗೆ ಧ್ವನಿಯೆತ್ತಿದ್ದಾರೆಕಳೆದಎರಡುತಿಂಗಳಹಿಂದೆ ಸುಪ್ರೀಂ ಕೋರ್ಟ್ ನೀಡಿದ ತೀರ್ಪುನಿಂದ ಅವರ ಬದುಕು ಬದಲಾಗುತ್ತದೆ ಎನ್ನುವ ಕಲ್ಪನೆ ಎಲ್ಲರ ಮನೆ ಮಾತಾಗಿದ್ದು ಆದರೆ ಸರ್ಕಾರ ಮಾತ್ರ ಅದಕ್ಕೆ ಅನುಮೋದನೆ ನೀಡಲು ಹಿಂದೇಟು ಹಾಕುತ್ತಿದೆ. ಒಳ ಮೀಸಲಾತಿ ಅಂಗೀಕಾರ ಮಾಡುವ ಕುರಿತಾಗಿ ಈಗಲೂ ಸಹ ನಿರಂತರ ದಲಿತ ಸಮುದಾಯಗಳ ಹೋರಾಟ ಮಾಡುತ್ತಲೇ ಇದ್ದಾರೆ, ಸಂಬಂಧಪಟ್ಟ ಸ್ವಾಮೀಜಿಗಳು ಸಹ ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ಮನವಿ ಪತ್ರವನ್ನು ಸಲ್ಲಿಸುತ್ತಲೇ ಇದ್ದಾರೆ ಆದರೂ ಸಹ ಸರ್ಕಾರ ಮಾತ್ರ ಕಣ್ಣು ಮುಚ್ಚಿ ಕುಂತಿದೆ, ಒಳ ಮೀಸಲಾತಿಯನ್ನು ಪಡೆದು ಆರ್ಥಿಕವಾಗಿ ಸದೃಢರಾಗಬೇಕೆನ್ನುವ ಸಮುದಾಯಗಳು ಮತ್ತೆ ಸಂಕಷ್ಟಕ್ಕೆ ಸಿಗುವಂತಹ ಪರಿಸ್ಥಿತಿ ಎದುರಾಗಿದೆ ಎಂದಿದ್ದಾರೆ.ಒಳ ಮೀಸಲಾತಿ ಜಾರಿ ಕುರಿತು ಸುಪ್ರೀಂ ಕೋರ್ಟ್ ಸೂಚನೆಯನ್ನು ನೀಡಿದ್ದರು ಸಹಾ ಇದರ ಬಗ್ಗೆ ಆಯಾ ಸಮುದಾಯದ ಚುನಾಯಿತ ಪ್ರತಿನಿಧಿಗಳು ಇದರ ಬಗ್ಗೆ ಮಾತನಾಡದಿರುವುದು ವಿಪರ್ಯಾಸವಾಗಿದೆ. ಈ ಮೀಸಲಾತಿ ಜಾರಿಯಾದರೆ ನಮ್ಮ ಮೀಸಲಾತಿ ಕೈತಪ್ಪುತ್ತದೆ ಎಂಬ ಭಯದಿಂದ ಇದನ್ನು ಜಾರಿ ಮಾಡಲು ವಿಳಂಭ ಮಾಡುತ್ತಿದ್ದಾರೆ ನೊಂದವರ ಧ್ವನಿಯಾಗಿ ಅಮ್ ಆದ್ಮಿ ಪಾರ್ಟಿ ಕರ್ನಾಟಕ. ಚಿತ್ರದುರ್ಗ ಜಿಲ್ಲೆ ಘಟಕ ಕೆಲಸ ಮಾಡಲಿದೆ ಅವರ ಪರವಾಗಿ ಹೋರಾಟವನ್ನು ಮಾಡಲಿದೆ. ಸರ್ಕಾರ ಇದನ್ನು ಜಾರಿ ಮಾಡದಿದ್ದರೆ ಮುಂದಿನ ದಿನದಲ್ಲಿ ವಿಧಾನಸೌಧ ಮುತ್ತಿಗೆಯನ್ನು ಸಹಾ ಹಾಕಲಾಗುವುದು, ಈ ಮೀಸಲಾತಿಯ ಬಗ್ಗೆ ಯಾವುದೇ ರಾಜಕೀಯ ಪಕ್ಷಗಳು ಸಹಾ ಯಾವ ಮಾತನ್ನು ಸಹಾ ಹೇಳುತ್ತಿಲ್ಲ ಬರೀ ಮಾತಿನಲ್ಲಿ ಭಾಷಣದಲ್ಲಿ ಹಿಂದುಳಿದವರ ಪರವಾಗಿ ನಾವು ಇದ್ದೇವೆ ಎಂದು ಹೇಳುವ ರಾಜಕೀಯ ಪಕ್ಷದ ಮುಖಂಡರು ಇದನ್ನು ಜಾರಿ ಮಾಡಿಸಲು ಮುಂದಾಗಬೇಕಿದೆ ಎಂದು ವಿವಿಧ ರಾಜಕೀಯ ಪಕ್ಷದವರನ್ನು ಜಗದೀಶ್ ಆಗ್ರಹಿಸಿದರು.

ಮೀಸಲಾತಿಯನ್ನು ನೀಡುವುದಾದರೆ ರಾಜ್ಯದ ಜನಸಂಖ್ಯೆಯ ಆಧಾರದ ಮೇಲೆ ಮೀಸಲಾತಿಯನ್ನು ಹಂಚಿಕೆ ಮಾಡಬೇಕಿದೆ, ಇದಕ್ಕೆ ಜನಗಣತಿಯನ್ನು ಮಾಡಿಸುವುದರ ಮೂಲಕ ಮೀಸಲಾತಿಯನ್ನು ನೀಡಬೇಕಿದೆ ಇಲ್ಲಿ ಯಾರಿಗೂ ಸಹಾ ಅನ್ಯಾಯವಾಗದ ರೀತಿಯಲ್ಲಿ ಸರ್ಕಾರ ಮೀಸಲಾತಿಯನ್ನು ಹಂಚಿಕೆ ಮಾಡಬೇಕಿದೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T